ಸಂಪುಟ: 11 ಸಂಚಿಕೆ: 190 ಪುಟ: 4+2 ಬೆಲೆ : 3.00 ಬುಧವಾರ, ಸೆಪ್ಟೆಂಬರ್ 02, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 190 Pages : 4+2 Rate : 3.00 Wednesday, September 02, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಮುಂದಿನ ಬರ ಪಟ್ಟಿಯಲ್ಲಿ ಗದಗ ಜಿಲ್ಲೆಯ ಹೆಚ್ಚಿನ ತಾಲೂಕುಗಳ ಸೇರ್ಪಡೆಗೆ ಡಿಕೆಶಿ ಭರವಸೆ

# ರೈತರಿಗೆ ನ್ಯಾಯ ಒದಗಿಸುವುದು ಸರ್ಕಾರದ ಕರ್ತವ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಭೀಕರ ಬರ ಪರಿಸ್ಥಿತಿಯಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ನ್ಯಾಯ ಒದಗಿಸುವುದು ಸರ್ಕಾರದ ಕರ್ತವ್ಯವಾಗಿದೆ. ಗದಗ ಜಿಲ್ಲೆಯ ವಾಸ್ತವಿಕ ಬರ ಪರಿಸ್ಥಿತಿಯ ಕುರಿತು ಕೇಂದ್ರ ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಿ, ಮುಂದಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಜಿಲ್ಲೆಯ ಸಾಧ್ಯವಾದಷ್ಟು ಹೆಚ್ಚಿನ ತಾಲೂಕುಗಳನ್ನು ಸೇರ್ಪಡೆಗೊಳಿಸಲು ಸರ್ಕಾರ ಪ್ರಯತ್ನಿಸಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು. ಮಂಗಳವಾರ ಜಿಲ್ಲಾಡಳಿತ ಭವನದಲ್ಲಿ ಗದಗ ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯ ಒಂದು ತಾಲೂಕನ್ನು ಮಾತ್ರ ಬರಪೀಡಿತ ತಾಲೂಕು ಎಂದು ಘೋಷಿಸಿರುವ ಹಿನ್ನೆಲೆಯಲ್ಲಿ ಜಿಲ್ಲೆಗೆ ಆಗಮಿಸಿ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲಾಗಿದೆ. ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ಬೆಳೆ ಪರಿಸ್ಥಿತಿ ತೀವ್ರವಾಗಿ ಹದಗೆಟ್ಟಿದ್ದು, ಶೇ.95ರಷ್ಟು ಪ್ರದೇಶದಲ್ಲಿ ಹಸಿರು ಕಾಣದಂತಹ ದುಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಹೇಳಿದರು.

ಗದಗ ಜಿಲ್ಲೆಯ ವಿವಿಧ ಕಟ್ಟಡಗಳು ವಿಭಿನ್ನ ವಿನ್ಯಾಸ ಹಾಗೂ ವೈಶಿಷ್ಟ್ಯಗಳನ್ನು ಹೊಂದಿದ್ದು, ಜಿಲ್ಲೆ ಮಾದರಿ ಜಿಲ್ಲೆಯಾಗಿ ರೂಪುಗೊಳ್ಳುತ್ತಿದೆ ಎಂದು ಮುಖ್ಯಮಂತ್ರಿ ಶ್ಲಾಘಿಸಿದರು. ಜಿಲ್ಲೆಯ ಮಹತ್ವಾಕಾಂಕ್ಷೆಯ ಮುಕ್ತಿವನ ಯೋಜನೆಯನ್ನು ಸರ್ಕಾರದ ನೂರು ದಿನಗಳ ವರದಿಯಲ್ಲಿ ಸೇರಿಸಲಾಗುವುದು ಎಂದರು.





ನಶಾಮುಕ್ತ ದೇಶ ನಿರ್ಮಾಣಕ್ಕೆ ಯುವಜನರನ್ನು ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದ ಅವರು, ಈ ಉದ್ದೇಶಕ್ಕಾಗಿ ಪ್ರತಿ ಗ್ರಾಮ ಪಂಚಾಯಿತಿಗೆ 10 ಲಕ್ಷ ಅನುದಾನ ನೀಡಲಾಗುವುದು ಎಂದರು.

ಈ ಅನುದಾನವನ್ನು ಬಳಸಿಕೊಂಡು ಯುವಜನರಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಜೊತೆಗೆ ನಾಯಕತ್ವದ ಗುಣಗಳನ್ನು ಬೆಳೆಸುವ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ಹೇಳಿದರು. ರಾಜ್ಯ ಸರ್ಕಾರದಿಂದ 'ತೇಗದ ಸಿರಿ' ಯೋಜನೆ ಜಾರಿಗೆ ತರಲಾಗುತ್ತಿದ್ದು, ರಸ್ತೆ ಬದಿಗಳಲ್ಲಿ ಹಾಗೂ ರೈತರ ಜಮೀನುಗಳಲ್ಲಿ ತೇಗದ ಮರಗಳನ್ನು ಬೆಳೆಸುವ ಮೂಲಕ ಮುಂದಿನ ದಿನಗಳಲ್ಲಿ ರೈತರಿಗೆ ಹೆಚ್ಚುವರಿ ಆದಾಯದ ಮೂಲ ಕಲ್ಪಿಸುವ ಉದ್ದೇಶ ಹೊಂದಲಾಗಿದೆ ಎಂದು ವಿವರಿಸಿದರು.

ಸರ್ಕಾರಿ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿದ್ದು ಸಾರ್ವಜನಿಕರಿಗೆ ಲಭ್ಯವಿರಬೇಕು ಎಂದು ಸೂಚಿಸಿದ ಮುಖ್ಯಮಂತ್ರಿ, ಅಧಿಕಾರಿಗಳು ಉತ್ತಮವಾಗಿ ಕಾರ್ಯನಿರ್ವಹಿಸಿದರೆ ಸರ್ಕಾರಕ್ಕೂ ಉತ್ತಮ ಹೆಸರು ಬರುತ್ತದೆ. ಕಾನೂನಿನ ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸುವುದರ ಜೊತೆಗೆ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಮಾತನಾಡಿ, ಮುಖ್ಯಮಂತ್ರಿಗಳ ನಿರ್ದೇಶನದಂತೆ ಈಗಾಗಲೇ ಗದಗ ಜಿಲ್ಲೆಯ ಎಲ್ಲ ತಾಲೂಕುಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯ ಸ್ಥಳ ಪರಿಶೀಲನೆ ನಡೆಸಲಾಗಿದೆ. ಅಧಿಕಾರಿಗಳಿಂದ ಮಾಹಿತಿ ಪಡೆದು ಕ್ರೋಢೀಕೃತ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ರೈತರ ಬೆಳೆಗಳು ಸಂಪೂರ್ಣವಾಗಿ ಬಾಧಿತವಾಗಿವೆ. ಸಕಾಲಕ್ಕೆ ಮಳೆಯಾಗದ ಕಾರಣ ಹಲವು ರೈತರು ಬಿತ್ತನೆ ಮಾಡಲೂ ಸಾಧ್ಯವಾಗದಂತಹ ಪರಿಸ್ಥಿತಿ ಎದುರಾಗಿದೆ. ಹೀಗಾಗಿ ಗದಗ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸುವಂತೆ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಶಾಸಕ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಮುಖ್ಯಮಂತ್ರಿಗಳು ರೈತರ ನೈಜ ಪರಿಸ್ಥಿತಿಯನ್ನು ಅರಿತು ಅವರ ಸಮಸ್ಯೆಗಳ ಪರಿಹಾರಕ್ಕೆ ಅಧ್ಯಯನಶೀಲವಾಗಿ ಸ್ಪಂದಿಸುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು. ಕಿತ್ತೂರು ಕರ್ನಾಟಕ ಭಾಗದಲ್ಲಿ ಹೊಬಳಿಗಳ ಸಂಖ್ಯೆಯನ್ನು ಹೆಚ್ಚಿಸುವಂತೆ ಮನವಿ ಮಾಡಿದ ಅವರು, ರೈತರ ಬೆಳೆ ವಿಮೆಯಲ್ಲಿ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು ಎಂದು ಒತ್ತಾಯಿಸಿದರು. ಗದಗ ಭಾಗದ ವಿಶಿಷ್ಟ ಹವಾಮಾನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಡ್ರೋನ್ ಮೂಲಕ ಮೋಡ ಬಿತ್ತನೆ ನಡೆಸುವ ಸಾಧ್ಯತೆ ಕುರಿತು ಅಧ್ಯಯನ ಮಾಡಲು ಅನುದಾನ ನೀಡುವಂತೆಯೂ ಅವರು ಮನವಿ ಮಾಡಿದರು.

ಶಾಸಕ ಸಿ.ಸಿ. ಪಾಟೀಲ ಅವರು ನರಗುಂದ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸುವಂತೆ ಮನವಿ ಮಾಡಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರವು ಮೂರು ತಾಲೂಕುಗಳನ್ನು ಒಳಗೊಂಡಿದ್ದು, ಮಳೆಯ ಅಭಾವದಿಂದ ಬೆಳೆ ಬೆಳೆಯಲು ಸಾಧ್ಯವಾಗುತ್ತಿಲ್ಲ. ಕ್ಷೇತ್ರದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ 9 ಕೋಟಿ ಅನುದಾನ ಮಂಜೂರು ಮಾಡುವಂತೆ ಮನವಿ ಮಾಡಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವಂತೆ ಮನವಿ ಮಾಡಿದರು. ಗದಗ-ಬೆಟಗೇರಿ ಅವಳಿ ನಗರಕ್ಕೆ ಸಮರ್ಪಕ ಕುಡಿಯುವ ನೀರು ಪೂರೈಕೆಯಾಗಬೇಕು.

ಈ ಕುರಿತು ಕೆಡಿಪಿ ಸಭೆಗಳಲ್ಲಿ ಹಲವು ಬಾರಿ ಪ್ರಸ್ತಾಪಿಸಿದ್ದರೂ ಬಹುದಿನಗಳ ಸಮಸ್ಯೆ ಇನ್ನೂ ಇತ್ಯರ್ಥವಾಗಿಲ್ಲ ಎಂದು ತಿಳಿಸಿದರು.

ರಾಜ್ಯ ವಿಕೇಂದ್ರೀಕರಣ, ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಡಿಜಿಟಲೀಕರಣದ ಮೂಲಕ ಪಾವತಿ ವ್ಯವಸ್ಥೆ ಜಾರಿಗೊಳಿಸಲು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ, ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ರಾಜ್ಯ ಕಂದಾಯ ಇಲಾಖೆಯ ವಿಪತ್ತು ನಿರ್ವಹಣೆ (ಪ್ರಕೃತಿ ವಿಕೋಪ) ವಿಭಾಗದ ಕಾರ್ಯದರ್ಶಿ ಹಾಗೂ ಪರಿಹಾರ ಆಯುಕ್ತ ಮನೋಜ್ ಕುಮಾರ್ ಮೀನಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕುಮಾರ್, ಅಧಿಕಾರಿಗಳು ಉಪಸ್ಥಿತರಿದ್ದರು.

> ಗದಗ ಜಿಲ್ಲೆಯ ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ಬೆಳೆಗಳು ತೀವ್ರ ಹಾನಿಗೊಳಗಾಗಿದ್ದು, ವಾಸ್ತವಿಕ ಪರಿಸ್ಥಿತಿಯ ಸಮಗ್ರ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು. ಮುಂದಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಗದಗ ಜಿಲ್ಲೆಯ ಸಾಧ್ಯವಾದಷ್ಟು ಹೆಚ್ಚಿನ ತಾಲೂಕುಗಳನ್ನು ಸೇರ್ಪಡೆಗೊಳಿಸಿ ಸಂಕಷ್ಟದಲ್ಲಿರುವ ರೈತರಿಗೆ ನ್ಯಾಯ ಒದಗಿಸಲು ಸರ್ಕಾರ ಎಲ್ಲ ರೀತಿಯ ಪ್ರಯತ್ನ ನಡೆಸಲಿದೆ.
>
> - ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ

---

### ಮುಂಡರಗಿಯಲ್ಲಿ ವಿಶ್ವ ಛಾಯಾಗ್ರಹಣ ದಿನಾಚರಣೆ, ಸಂಘದ ವಾರ್ಷಿಕೋತ್ಸವ

## ಕ್ಲಿಕ್‌ಗಳ ಹಿಂದೆ ಅಡಗಿದೆ ನೆನಪುಗಳ ಲೋಕ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ತಾಲೂಕು ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ 187ನೇ ವಿಶ್ವ ಛಾಯಾಗ್ರಹಣ ದಿನಾಚರಣೆ, ಸಂಘದ 14ನೇ ವಾರ್ಷಿಕೋತ್ಸವ ಹಾಗೂ ಹಿರಿಯ ಚೇತನ ದಿ. ಬಿ. ಬಾಬು ಅವರಿಗೆ ನುಡಿ ನಮನ ಕಾರ್ಯಕ್ರಮ ಪಟ್ಟಣದಲ್ಲಿ ಅರ್ಥಪೂರ್ಣವಾಗಿ ಜರುಗಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಂಡರಗಿ ತಾಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ವೀರೇಶ ಹಡಗಲಿ ವಹಿಸಿದ್ದರು.

ಹಿರಿಯ ಛಾಯಾಗ್ರಾಹಕರಾಗಿದ್ದ ದಿ. ಬಿ. ಬಾಬು ಅವರ ಸ್ಮರಣಾರ್ಥ ನಡೆದ ನುಡಿ ನಮನ ಕಾರ್ಯಕ್ರಮದಲ್ಲಿ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಗದಗ ಜಿಲ್ಲಾ ಕಾರ್ಯದರ್ಶಿ ಎ.ಕೆ. ಮುಲ್ಲಾನವರ ವಿಶೇಷ ಉಪನ್ಯಾಸ ನೀಡಿ, ಛಾಯಾಗ್ರಹಣ ಕ್ಷೇತ್ರಕ್ಕೆ ಬಾಬು ಅವರು ಸಲ್ಲಿಸಿದ ಸೇವೆ ಹಾಗೂ ಸಂಘದ ಬೆಳವಣಿಗೆಯಲ್ಲಿ ನೀಡಿದ ಕೊಡುಗೆಯನ್ನು ಸ್ಮರಿಸಿದರು.

ಬಳಿಕ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ದಿ. ಬಿ. ಬಾಬು ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿ, ಅವರೊಂದಿಗಿನ ಆತ್ಮೀಯ ಒಡನಾಟ ಮತ್ತು ಸೇವೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ನಾಗಲಿಂಗಪ್ಪ ಅರ್ಕಸಾಲಿ, ಮಾಜಿ ಗೌರವಾಧ್ಯಕ್ಷ ಕಾಶಿನಾಥ ಕಲಬುರ್ಗಿ, ಹಿರಿಯ ಛಾಯಾಗ್ರಾಹಕ ಅಂದಪ್ಪ ಕುರುಡಗಿ, ಕಾರ್ಯದರ್ಶಿ ಸಂತೋಷ ಅಳವಂಡಿ, ಖಜಾಂಚಿ ಮಾರುತಿ ಯಾವಗಲ್, ಸಹಕಾರ್ಯದರ್ಶಿ ರಾಜು ಚಿಕ್ಕಣ್ಣವರ, ನಿಂಗಪ್ಪ ಮೇಟಿ, ಶಂಭುಲಿಂಗ ಹರಪನಹಳ್ಳಿ, ಪರಶು ಡೊಗ್ಗಾರ್, ನಾಗರಾಜ ಪಾಟೀಲ, ತೋಟೇಶ್ ಬೆಳದಡಿ, ದತ್ತ ಕಲಬುರ್ಗಿ ಸೇರಿದಂತೆ ಮುಂಡರಗಿ ತಾಲೂಕಿನ ಅನೇಕ ಛಾಯಾಗ್ರಾಹಕ ಬಂಧುಗಳು ಭಾಗವಹಿಸಿದ್ದರು. ಸಂಘಟನಾ ಕಾರ್ಯದರ್ಶಿ ರಂಗನಾಥ ಕಂದಗಲ್ ಸ್ವಾಗತಿಸಿ, ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.



---

### ಮಾರ್ಗಸೂಚಿಯಂತೆ ಘೋಷಣೆ | ರೈತರ ಸಂಕಷ್ಟವನ್ನು ಕಣ್ಣಾರೆ ಕಂಡಿದ್ದೇನೆ ಎಂದ ಸಿಎಂ

## ಶೀಘ್ರವೇ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಬರಪೀಡಿತ ತಾಲೂಕುಗಳನ್ನು ಘೋಷಿಸುವ ಪ್ರಕ್ರಿಯೆಯನ್ನು ಸರ್ಕಾರದ ಮಾರ್ಗಸೂಚಿಗಳ ಅನುಸಾರವೇ ಕೈಗೊಳ್ಳಲಾಗುತ್ತಿದ್ದು, ವಾಸ್ತವಿಕ ಪರಿಸ್ಥಿತಿಯ ಅಧ್ಯಯನ ನಡೆಸಿ ಶೀಘ್ರವೇ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಗದಗ ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿ ಕುರಿತು ಮಂಗಳವಾರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾಧ್ಯಮಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯ ಪ್ರತಿಯೊಂದು ತಾಲೂಕಿಗೂ ಭೇಟಿ ನೀಡಿ ವಾಸ್ತವಾಂಶಗಳ ವರದಿ ನೀಡಿದ್ದಾರೆ. ಇದರೊಂದಿಗೆ ಅಧಿಕಾರಿಗಳು ಕೂಡ ಬರ ಪರಿಸ್ಥಿತಿಯ ಅಧ್ಯಯನ ನಡೆಸುತ್ತಿದ್ದಾರೆ. ಎರಡೂ ವರದಿಗಳನ್ನು ಪರಿಶೀಲಿಸಿ ಕೇಂದ್ರ ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಬೇಕಾಗಿದೆ ಎಂದು ವಿವರಿಸಿದರು.

ಗದಗ ಜಿಲ್ಲೆಯಲ್ಲಿ ರೈತರ ಬದುಕು ಅಪಾಯದಲ್ಲಿದ್ದು, ಜನತೆ ಆತಂಕಕ್ಕೆ ಒಳಗಾಗಿದ್ದಾರೆ. ಕಳೆದ 50 ವರ್ಷಗಳಲ್ಲೇ ಕಂಡುಬರದಷ್ಟು ಭೀಕರ ಬರ ಪರಿಸ್ಥಿತಿಗೆ ಜಿಲ್ಲೆ ತುತ್ತಾಗಿದೆ. ಈ ವರ್ಷ ಜಿಲ್ಲೆಯಲ್ಲಿ ಶೇ.40ರಷ್ಟು ಮಳೆ ಕೊರತೆಯಾಗಿದೆ. ಹೆಲಿಕಾಪ್ಟರ್‌ನಲ್ಲಿ ಪ್ರಯಾಣಿಸುವಾಗಲೂ ಹಲವು ಪ್ರದೇಶಗಳಲ್ಲಿ ಬಿತ್ತನೆಯೇ ಆಗದಿರುವುದು ಕಂಡುಬಂದಿದೆ ಎಂದು ಹೇಳಿದರು.

ಬಿತ್ತನೆ ಮಾಡಿರುವ ಪ್ರದೇಶಗಳಲ್ಲಿಯೂ ರೈತರ ಕೈಗೆ ಶೇ.10ರಿಂದ 15ರಷ್ಟು ಬೆಳೆ ಕೂಡ ಸಿಗದಂತಹ ದುಸ್ಥಿತಿ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ತಾವು ರೈತರ ಜಮೀನುಗಳಿಗೆ ತೆರಳಿ ಹತ್ತಿ, ಕಡಲೆಕಾಯಿ, ಜೋಳ ಹಾಗೂ ಸೂರ್ಯಕಾಂತಿ ಬೆಳೆಗಳನ್ನು ಪರಿಶೀಲಿಸಿದ್ದು, ರೈತರು ಯಾವ ಪ್ರಮಾಣದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂಬುದು ಮನವರಿಕೆಯಾಗಿದೆ ಎಂದರು. ರೈತರೊಂದಿಗೆ ನೇರವಾಗಿ ಚರ್ಚೆ ನಡೆಸಿ ಅವರ ನೋವುಗಳನ್ನು ಆಲಿಸಲಾಗಿದೆ. ಜನರು ಉದ್ಯೋಗ ಅರಸಿ ವಲಸೆ ಹೋಗುವುದನ್ನು ತಪ್ಪಿಸಲು ವಿಬಿಜಿ ರಾಮ್ ಜಿ ಯೋಜನೆ ಯಾವ ರೀತಿಯಲ್ಲಿ ನೆರವಾಗಬೇಕು ಎಂಬ ಬಗ್ಗೆಯೂ ರೈತರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

> ಬರ ಪ್ರದೇಶ ಘೋಷಣೆಯನ್ನು ಸರ್ಕಾರ ಮಾರ್ಗಸೂಚಿಯ ಅನುಸಾರವೇ ಮಾಡಬೇಕು. ಗದಗ ಜಿಲ್ಲೆಯ ರೈತರ ಪರಿಸ್ಥಿತಿಯನ್ನು ನಾನು ಸ್ವತಃ ಕಣ್ಣಾರೆ ಕಂಡಿದ್ದೇನೆ. ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ರೈತರ ಸಂಕಷ್ಟ ತೀವ್ರವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳು ಸಲ್ಲಿಸಿರುವ ವರದಿಯನ್ನು ಪರಿಶೀಲಿಸಿ, ಕೇಂದ್ರ ಸರ್ಕಾರದ ವರದಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡು ಶೀಘ್ರವೇ ಬರಪೀಡಿತ ತಾಲೂಕುಗಳ ಎರಡನೇ ಪಟ್ಟಿಯನ್ನು ಪ್ರಕಟಿಸುತ್ತೇವೆ.
>
> - ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ

ಪ್ರಸ್ತುತ ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕನ್ನು ಮಾತ್ರ ಬರಪೀಡಿತ ಎಂದು ಘೋಷಿಸಲಾಗಿದೆ. ಆದರೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜಿಲ್ಲೆಯ ಎಲ್ಲ ಶಾಸಕರು ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ ಎಂದು ಹೇಳಿದರು.

ಶಾಸಕ ಡಾ. ಎಚ್.ಕೆ. ಪಾಟೀಲ ಅವರು ಮೋಡ ಬಿತ್ತನೆ ಕುರಿತು ತಮ್ಮ ಅಭಿಪ್ರಾಯ ಮಂಡಿಸಿದ್ದಾರೆ. ಉಳಿದ ಶಾಸಕರು ಸಹ ವಿವಿಧ ವಿಷಯಗಳ ಕುರಿತು ಸರ್ಕಾರದ ಗಮನ ಸೆಳೆದಿದ್ದಾರೆ. ನೀರಾವರಿ, ಬೆಣ್ಣೆಹಳ್ಳ ಸೇರಿದಂತೆ ಹಲವು ಅಭಿವೃದ್ಧಿ ಯೋಜನೆಗಳ ಕುರಿತು ಚರ್ಚೆ ನಡೆಸಲಾಗಿದ್ದು, ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

#### ಕೇಂದ್ರದ ವರದಿಗೂ ಹೊಂದಾಣಿಕೆಯಾಗಬೇಕು

ರಾಜ್ಯ ಸರ್ಕಾರದ ಬರ ಪರಿಸ್ಥಿತಿ ವರದಿಯು ಕೇಂದ್ರ ಸರ್ಕಾರದ ಅಧ್ಯಯನ ವರದಿಯೊಂದಿಗೆ ಹೊಂದಾಣಿಕೆಯಾಗುವುದು ಅಗತ್ಯವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ದೆಹಲಿ ಕೇಂದ್ರದಿಂದ ಆಗಮಿಸುವ ಬರ ಅಧ್ಯಯನ ತಂಡಕ್ಕೆ ರಾಜ್ಯ ಸರ್ಕಾರದ ವರದಿ ಒಪ್ಪಿಗೆಯಾಗಬೇಕು. ಆಗ ಮಾತ್ರ ಕೇಂದ್ರ ಸರ್ಕಾರದಿಂದ ಅಗತ್ಯ ನೆರವು ದೊರೆಯಲು ಸಾಧ್ಯ. ಸರ್ಕಾರ ತನ್ನ ಮಟ್ಟದಲ್ಲಿ ಕೈಗೊಳ್ಳಬೇಕಾದ ಎಲ್ಲ ಕ್ರಮಗಳನ್ನು ಈಗಾಗಲೇ ಆರಂಭಿಸಿದೆ ಎಂದು ಹೇಳಿದರು.

ಕುಡಿಯುವ ನೀರಿನ ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ಕುಡಿಯುವ ನೀರಿನ ಉದ್ದೇಶಕ್ಕಾಗಿ 1 ಕೋಟಿ ಅನುದಾನ ನೀಡಲಾಗಿದ್ದು, ಜಿಲ್ಲಾಧಿಕಾರಿಗಳ ಖಾತೆಯಲ್ಲಿಯೂ ಹೆಚ್ಚುವರಿ ಹಣವನ್ನು ಲಭ್ಯವಾಗುವಂತೆ ಮಾಡಲಾಗಿದೆ ಎಂದು ವಿವರಿಸಿದರು.

ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಮತ್ತಷ್ಟು ಚುರುಕುಗೊಳ್ಳಬೇಕು. ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಕಚೇರಿಯಿಂದ ಕಚೇರಿಗೆ ಅಲೆಯುವುದನ್ನು ತಪ್ಪಿಸುವ ಉದ್ದೇಶದಿಂದ ಸೆಪ್ಟೆಂಬರ್ 5ರಿಂದ ಪ್ರಜಾಸೇವಾ ಆಂದೋಲನ ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ತಲುಪಬೇಕು. ಯೋಜನೆಗಳ ದುರ್ಬಳಕೆಯಾಗಬಾರದು ಎಂಬ ಉದ್ದೇಶದಿಂದ ಮರುಪರಿಶೀಲನೆ ನಡೆಸಲಾಗುತ್ತಿದ್ದು, ಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಸಮಿತಿಗಳನ್ನು ರಚಿಸಲಾಗುತ್ತಿದೆ ಎಂದರು.

ನಮ್ಮ ಸರ್ಕಾರ 100 ದಿನಗಳಲ್ಲಿ ಕೈಗೊಂಡಿರುವ ಕಾರ್ಯಗಳು ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಲಿರುವ ಯೋಜನೆಗಳ ಕುರಿತು ವಿಧಾನಸಭೆ ಅಧಿವೇಶನದಲ್ಲಿ ವಿವರಿಸಲು ನಿರ್ಧರಿಸಲಾಗಿತ್ತು. ಆದರೆ ವಿರೋಧ ಪಕ್ಷಗಳು ಅದಕ್ಕೆ ಅವಕಾಶ ನೀಡಲಿಲ್ಲ. ಆದ್ದರಿಂದ ಸರ್ಕಾರದ 100 ದಿನಗಳ ಕಾರ್ಯಕ್ರಮದ ಸಂದರ್ಭದಲ್ಲಿ ಈ ಎಲ್ಲ ವಿಷಯಗಳನ್ನು ಜನತೆಗೆ ತಿಳಿಸಲಾಗುವುದು ಎಂದು ಹೇಳಿದರು.

---

### ಗದಗ-ಮುಂಡರಗಿ ತಾಲೂಕಿನ ಬೆಳೆ ಪರಿಶೀಲನೆ ರೈತರ ಅಳಲಿಗೆ ಸ್ಪಂದಿಸಿದ ಸಿಎಂ

## ಬರದ ಬವಣೆ ಕಂಡ ಸಿಎಂ ಡಿಕೆಶಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ತೀವ್ರಗೊಂಡಿರುವ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಗದಗ ಹಾಗೂ ಮುಂಡರಗಿ ತಾಲೂಕಿನ ವಿವಿಧ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಬೆಳೆ ಹಾನಿ ಮತ್ತು ರೈತರ ಸಂಕಷ್ಟವನ್ನು ಪರಿಶೀಲಿಸಿದರು.


ಮುಂಡರಗಿ ತಾಲೂಕಿನ ಕದಾಂಪುರ ಗ್ರಾಮದ ಸರ್ವೇ ನಂ.437/5ರ ಶಂಕರಪ್ಪ ಗಾವರವಾಡ ಅವರ ಜಮೀನಿನ ಸೂರ್ಯಕಾಂತಿ ಬೆಳೆ, ಸರ್ವೇ ನಂ.434/2ಎರ ಸುನೀತಾ ಈರಪ್ಪ ಪೂಜಾರ ಅವರ ಜಮೀನಿನ ಮೆಕ್ಕೆಜೋಳ ಹಾಗೂ ಸರ್ವೇ ನಂ.434/1ಎರ ಕಲ್ಲಪ್ಪ ಕಾಡಪ್ಪಗೋಳ ಅವರ ಜಮೀನಿನ ಹತ್ತಿ ಬೆಳೆಗಳನ್ನು ಮುಖ್ಯಮಂತ್ರಿ ವೀಕ್ಷಿಸಿದರು.

ನಂತರ ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ಸರ್ವೇ ನಂ.303ರ ಶ್ರೀನಾಥ್ ಮಾರ್ತಾಂಡಗೌಡ ಅವರ ಜಮೀನಿನ ಶೇಂಗಾ, ಹತ್ತಿ ಹಾಗೂ ಮೆಣಸಿನಕಾಯಿ ಬೆಳೆಗಳನ್ನು ಪರಿಶೀಲಿಸಿದರು. ಹುಲಕೋಟಿ ಗ್ರಾಮದ ಸರ್ವೇ ನಂ.154/12ರ ಹನುಮಂತಪ್ಪ ಸೋಗಿನ ಅವರ ಜಮೀನಿನ ಮೆಕ್ಕೆಜೋಳ ಬೆಳೆಗೂ ಭೇಟಿ ನೀಡಿ, ಸ್ಥಳೀಯ ರೈತರೊಂದಿಗೆ ಚರ್ಚಿಸಿದರು.

ಈ ಬಾರಿ ಮಳೆಯ ಕೊರತೆಯಿಂದ ಬೆಳೆಗಳು ಹಾಳಾಗಿದ್ದು, ಜಿಲ್ಲೆಯ ಎಲ್ಲಾ ತಾಲೂಕುಗಳ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈಗಾಗಲೇ ಘೋಷಣೆಯಾಗದ ಉಳಿದ ಆರು ತಾಲೂಕುಗಳನ್ನೂ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ರೈತರು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

> ಗದಗ ಜಿಲ್ಲೆಯ ಬರ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸುತ್ತಿದ್ದೇವೆ. ಇನ್ನಷ್ಟು ಪ್ರದೇಶಗಳಿಗೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಅಧ್ಯಯನ ಮಾಡಲಾಗುವುದು. ಬಳಿಕ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ, ಕೇಂದ್ರದ ಮಾರ್ಗಸೂಚಿಯಂತೆ ಬರಪೀಡಿತ ತಾಲೂಕುಗಳ ಘೋಷಣೆ ಕುರಿತು ಕ್ರಮ ಕೈಗೊಳ್ಳಲಾಗುವುದು.
>
> - ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ, ಶಾಸಕರಾದ ಎಚ್.ಕೆ. ಪಾಟೀಲ, ಸಿ.ಸಿ. ಪಾಟೀಲ, ಎನ್.ಎನ್. ಕೋನರಡ್ಡಿ, ಪ್ರಾದೇಶಿಕ ಆಯುಕ್ತೆ ಜಾನಕಿ ಎಸ್., ಐಜಿಪಿ ಸಂದೀಪ್ ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಪಂ ಸಿಇಒ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿತುನ್ ಎಚ್.ಎನ್., ಡಿಸಿಎಫ್ ಸಂತೋಷ ಕುಮಾರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.





ಗದಗ ತಾಲೂಕಿನ ಹುಲಕೋಟಿ ಗ್ರಾಮ ಪಂಚಾಯಿತಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಮಂಗಳವಾರ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ, ಗದಗ ಶಾಸಕ ಡಾ. ಎಚ್.ಕೆ. ಪಾಟೀಲ, ಹುಲಕೋಟಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

### ಜನರ ಅಹವಾಲಿಗೆ ತ್ವರಿತ ಪರಿಹಾರ; ಶನಿವಾರ ಜನಸ್ಪಂದನ, ಬುಧವಾರ ಮೂರು ಹಂತದ ಪರಿಶೀಲನೆ

# ಮನೆಬಾಗಿಲಿಗೆ ಆಡಳಿತ: ಸೆ.5ರಿಂದ 'ಪ್ರಜಾಸೇವಾ ಅಭಿಯಾನ'

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸರ್ಕಾರಿ ಸೇವೆಗಳು ಮತ್ತು ಯೋಜನೆಗಳ ಸೌಲಭ್ಯ ಪಡೆಯಲು ಸಾರ್ವಜನಿಕರು ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಿ, ಆಡಳಿತ ವ್ಯವಸ್ಥೆಯನ್ನೇ ಜನರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮಹತ್ವಾಕಾಂಕ್ಷೆಯ 'ಪ್ರಜಾಸೇವಾ ಅಭಿಯಾನ' ಆರಂಭಿಸುತ್ತಿದೆ. ಸೆಪ್ಟೆಂಬರ್ 5ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಿಂದ ಅಭಿಯಾನಕ್ಕೆ ಚಾಲನೆ ದೊರೆಯಲಿದೆ.

ಸಾರ್ವಜನಿಕರ ಕುಂದುಕೊರತೆಗಳನ್ನು ನೇರವಾಗಿ ಆಲಿಸಿ, ಸಾಧ್ಯವಾದ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಒದಗಿಸುವುದು ಹಾಗೂ ಬಾಕಿ ಅರ್ಜಿಗಳನ್ನು ನಿಗದಿತ ಅವಧಿಯಲ್ಲಿ ವಿಲೇವಾರಿ ಮಾಡುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಆಡಳಿತದಲ್ಲಿ ಪಾರದರ್ಶಕತೆ ಮತ್ತು ಅಧಿಕಾರಿಗಳ ಉತ್ತರದಾಯಿತ್ವವನ್ನು ಹೆಚ್ಚಿಸುವ ಮೂಲಕ ಜನಪರ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಲು ಸರ್ಕಾರ ಯೋಜನೆ ರೂಪಿಸಿದೆ.

ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕೇಂದ್ರದಲ್ಲಿ ಪ್ರಜಾಸೇವಾ ಸಭೆ ನಡೆಯಲಿದೆ. ಎರಡನೇ ಮತ್ತು ನಾಲ್ಕನೇ ಶನಿವಾರ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಅಥವಾ ಹೋಬಳಿ ಮಟ್ಟದಲ್ಲಿ ಸಭೆ ಆಯೋಜಿಸಲಾಗುವುದು. ಮುಂದಿನ ಮೂರರಿಂದ ನಾಲ್ಕು ತಿಂಗಳ ಕಾರ್ಯಕ್ರಮಗಳನ್ನು ಒಳಗೊಂಡ ಏಕೀಕೃತ ಕ್ಯಾಲೆಂಡರ್ ಕೂಡ ಸಿದ್ಧಪಡಿಸಲಾಗುತ್ತಿದೆ.

ಸಭೆಯ ಕುರಿತು ಸಾರ್ವಜನಿಕರಿಗೆ ಕನಿಷ್ಠ 15 ದಿನ ಮುಂಚಿತವಾಗಿ ಮನೆ-ಮನೆಗೆ ಕರಪತ್ರ ವಿತರಿಸಲಾಗುವುದು. ಸಭೆಯ ದಿನಾಂಕ, ಸಮಯ ಮತ್ತು ಸ್ಥಳದ ಮಾಹಿತಿಯನ್ನು ಕೃತಕ ಬುದ್ಧಿಮತ್ತೆ ಆಧಾರಿತ ಕಾಲ್ ಸೆಂಟರ್ ಮೂಲಕವೂ ನೀಡಲಾಗುತ್ತದೆ. ಸಾರ್ವಜನಿಕರು ತಮ್ಮ ಅರ್ಜಿಗಳು ಮತ್ತು ಅಹವಾಲುಗಳನ್ನು ಮುಂಚಿತವಾಗಿ ಗ್ರಾಮ ಒನ್ ಕೇಂದ್ರಗಳಲ್ಲಿ ಸಲ್ಲಿಸಬಹುದಾಗಿದೆ. ಸಭಾ ಸ್ಥಳದಲ್ಲಿಯೂ ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಅಗತ್ಯ ವ್ಯವಸ್ಥೆ ಇರಲಿದೆ.

ಸಭೆಯ ದಿನ ಹೊಸ ಅಹವಾಲುಗಳು ಹಾಗೂ ಈಗಾಗಲೇ ಸಲ್ಲಿಸಿದ್ದರೂ ಪರಿಹಾರವಾಗದ ಪ್ರಕರಣಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ಸಕಾಲ, ಸಿಎಸ್‌ಸಿ ಅಥವಾ ಐಪಿಜಿಆರ್‌ಎಸ್‌ನಲ್ಲಿ ನೋಂದಾಯಿಸಿ 21 ದಿನಗಳಾದರೂ ಸಮರ್ಪಕ ಪರಿಹಾರ ಸಿಗದ ಪ್ರಕರಣಗಳಿಗೆ ಆದ್ಯತೆ ನೀಡಲಾಗುವುದು. ಅರ್ಹ ಫಲಾನುಭವಿಗಳಿಗೆ ವಿವಿಧ ಯೋಜನೆಗಳ ಮಂಜೂರಾತಿ ಪತ್ರಗಳನ್ನು ಸ್ಥಳದಲ್ಲಿಯೇ ವಿತರಿಸುವ ವ್ಯವಸ್ಥೆಯೂ ಇರಲಿದೆ.

ಪ್ರತಿ ಬುಧವಾರ ಅರ್ಜಿಗಳು ಮತ್ತು ಅಹವಾಲುಗಳ ಪ್ರಗತಿಯನ್ನು ಮೂರು ಹಂತಗಳಲ್ಲಿ ಪರಿಶೀಲಿಸಲಾಗುವುದು. ಬೆಳಿಗ್ಗೆ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು, ನಂತರ ಉಪವಿಭಾಗ ಮಟ್ಟದಲ್ಲಿ ಸಹಾಯಕ ಆಯುಕ್ತರು ಮತ್ತು ಮಧ್ಯಾಹ್ನ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಬಾಕಿ ಪ್ರಕರಣಗಳ ಪರಿಶೀಲನೆ ನಡೆಸಲಿದ್ದಾರೆ. ನಿಗದಿತ ಅವಧಿಯಲ್ಲಿ ಪರಿಹಾರವಾಗದ ಪ್ರಕರಣಗಳನ್ನು ಸ್ವಯಂಚಾಲಿತವಾಗಿ ಮೇಲಧಿಕಾರಿಗಳ ಹಂತಕ್ಕೆ ವರ್ಗಾಯಿಸಲಾಗುವುದು.

ಸಭಾ ಸ್ಥಳಗಳಲ್ಲಿ ವಿವಿಧ ಇಲಾಖೆಗಳ ಮಳಿಗೆಗಳನ್ನು ಸ್ಥಾಪಿಸಿ, ಸರ್ಕಾರಿ ಯೋಜನೆಗಳು ಹಾಗೂ ಅರ್ಹತಾ ಮಾನದಂಡಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದು. ಸಾರ್ವಜನಿಕರು 1902 ಸಹಾಯವಾಣಿ ಸಂಖ್ಯೆ ಅಥವಾ ಐಪಿಜಿಆರ್‌ಎಸ್ ಪೋರ್ಟಲ್ ಮೂಲಕವೂ ತಮ್ಮ ಕುಂದುಕೊರತೆಗಳನ್ನು ದಾಖಲಿಸಬಹುದು.



> ಜನರು ಸರ್ಕಾರಿ ಕಚೇರಿಗಳಿಗೆ ಅಲೆಯುವ ಬದಲು ಆಡಳಿತ ವ್ಯವಸ್ಥೆಯೇ ಜನರ ಬಳಿಗೆ ತಲುಪಬೇಕು ಎಂಬ ಉದ್ದೇಶದಿಂದ ಪ್ರಜಾಸೇವಾ ಅಭಿಯಾನ ರೂಪಿಸಲಾಗಿದೆ. ಅಹವಾಲುಗಳ ತ್ವರಿತ ಪರಿಹಾರ, ಅಧಿಕಾರಿಗಳ ಹೊಣೆಗಾರಿಕೆ ಹಾಗೂ ಪಾರದರ್ಶಕ ಆಡಳಿತವನ್ನು ಖಚಿತಪಡಿಸುವ ಮೂಲಕ ಜನಪರ ಸರ್ಕಾರದ ಆಶಯವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುವುದು.
>
> - ಡಾ. ಶಾಲಿನಿ ರಜನೀಶ್, ಸರ್ಕಾರದ ಮುಖ್ಯ ಕಾರ್ಯದರ್ಶಿ

---

### ನಿರಂತರ ಓದು-ಬರಹದಿಂದ ವ್ಯಕ್ತಿತ್ವ ಮತ್ತು ಸೃಜನಶೀಲತೆ ವಿಕಸನ

# ಅಕ್ಷರಗಳಲ್ಲ, ಸಮಾಜ ಬದಲಿಸುವ ಶಕ್ತಿ ಸಾಹಿತ್ಯಕ್ಕಿದೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾಹಿತ್ಯವೆಂದರೆ ಕೇವಲ ಅಕ್ಷರಗಳ ಜೋಡಣೆಯಲ್ಲ. ಅದು ವ್ಯಕ್ತಿಯ ಚಿಂತನೆಗೆ ದಿಕ್ಕು ತೋರಿಸುವ, ಸಮಾಜದಲ್ಲಿ ಪರಿವರ್ತನೆ ತರುವ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಪ್ರಬಲ ಶಕ್ತಿಯಾಗಿದೆ ಎಂದು ಕನಕದಾಸ ಶಿಕ್ಷಣ ಸಮಿತಿ ಚೇರಮನ್ ರವೀಂದ್ರನಾಥ ಬಿ. ದಂಡಿನ ಹೇಳಿದರು.

ಪಟ್ಟಣದ ಬೀಚಿ ಬಳಗ ಹಾಗೂ ಕೆ.ಎಸ್.ಎಸ್. ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಬೀಚಿ ಬಳಗದ ಮಾಸಿಕ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೀಚಿ ಸಾಹಿತ್ಯವನ್ನು ಸವಿಯುವ ಅವಕಾಶ ದೊರೆತಿರುವುದು ವಿಶೇಷವಾಗಿದೆ. ಸಾಹಿತ್ಯ ಮತ್ತು ಸಂಗೀತಕ್ಕೆ ಜಾತಿ, ಮತ, ಪಂಥ, ವಯಸ್ಸು ಹಾಗೂ ಆರ್ಥಿಕ ಸ್ಥಿತಿಯ ಯಾವುದೇ ಗಡಿಗಳಿಲ್ಲ. ಅವು ಎಲ್ಲರನ್ನೂ ಒಂದುಗೂಡಿಸುವ ಶಕ್ತಿ ಹೊಂದಿವೆ ಎಂದು ಹೇಳಿದರು.

ಸಾಹಿತ್ಯ ರಚನೆಗೆ ನಿರಂತರ ಅಧ್ಯಯನ, ಭಾಷೆಯ ಮೇಲಿನ ಪ್ರಭುತ್ವ ಹಾಗೂ ಅಪಾರ ಶಬ್ದ ಸಂಪತ್ತು ಅಗತ್ಯವಾಗಿದೆ. ವಿದ್ಯಾರ್ಥಿಗಳು ನಿತ್ಯದ ಓದು-ಬರಹದ ಅಭ್ಯಾಸ ಬೆಳೆಸಿಕೊಳ್ಳಬೇಕು. ಇದರಿಂದ ಭಾಷಾ ಜ್ಞಾನ, ಶಬ್ದ ಸಂಪತ್ತು ಹಾಗೂ ಸೃಜನಶೀಲತೆ ವೃದ್ಧಿಯಾಗಿ ಉತ್ತಮ ಸಾಹಿತಿಗಳಾಗಲು ಸಾಧ್ಯ ಎಂದರು.

ನರೇಗಲ್ಲದಲ್ಲಿ ಬೀಚಿ ಬಳಗವು ಪ್ರತಿ ತಿಂಗಳು ಮಾಸಿಕ ಸಭೆ ಆಯೋಜಿಸುವ ಮೂಲಕ ಸಾಹಿತ್ಯಾಸಕ್ತಿಯನ್ನು ಬೆಳೆಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ. ಗದಗ ಜಿಲ್ಲೆಯಲ್ಲಿ ಸಾಹಿತ್ಯ ಕ್ಷೇತ್ರಕ್ಕೆ ಇಂತಹ ನಿರಂತರ ಪ್ರೋತ್ಸಾಹ ನೀಡುವ ಚಟುವಟಿಕೆಗಳು ಇನ್ನಷ್ಟು ವಿಸ್ತರಣೆಯಾಗಬೇಕು ಎಂದು ಆಶಿಸಿದರು.ಮುಖ್ಯಶಿಕ್ಷಕ ಎಸ್.ಬಿ. ದೊಡ್ಡಣ್ಣವರ ಹಬ್ಬಗಳ ಆಚರಣೆಯ ಹಿಂದಿರುವ ಆಧ್ಯಾತ್ಮಿಕ, ಸಾಂಸ್ಕೃತಿಕ ಹಾಗೂ ವೈಜ್ಞಾನಿಕ ಹಿನ್ನೆಲೆಯ ಕುರಿತು ಉಪನ್ಯಾಸ ನೀಡಿದರು. ಶಿವಯೋಗಿ ಜಕ್ಕಲಿ ಅಧ್ಯಕ್ಷತೆ ವಹಿಸಿದ್ದರು. ಅಬ್ಬಿಗೇರಿಯ ಯಲ್ಲಾಲಿಂಗೇಶ್ವರ ಮಠದ ಡಾ. ಬಸವರಾಜ ಬಸವರಡ್ಡಿ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ವೈದ್ಯ ಕೆ.ಬಿ. ಧನ್ನೂರ ಮಾತನಾಡಿ ಹಾಡಿದರು. ಈ ಸಂದರ್ಭದಲ್ಲಿ ಎಸ್.ಬಿ. ದೊಡ್ಡಣ್ಣವರ, ನಿವೃತ್ತ ಮುಖ್ಯಶಿಕ್ಷಕಿ ಭಾರತಿ ಶರ್ಸಿ ಹಾಗೂ ಪರ್ವತಾರೋಹಿ ಸೃಷ್ಟಿ ಮೇಟಿ ಅವರನ್ನು ಸನ್ಮಾನಿಸಲಾಯಿತು.

ಕೆ.ಪಿ. ಸಾಲಿಮಠ ಹಾಗೂ ಶಿಕ್ಷಕ ಮೆಹರವಾಡೆಯವರ ಸಂಗೀತ ಜುಗಲಬಂದಿ ಕಾರ್ಯಕ್ರಮಕ್ಕೆ ಮೆರುಗು ನೀಡಿತು. ಡಿ.ಎ. ಅರವಟಿಗಿಮಠ, ರಾಜಶೇಖರಗೌಡ ಪಾಟೀಲ, ಎಂ.ಕೆ. ಬೇವಿನಕಟ್ಟಿ, ಬಿ.ವಿ. ದೇಸಾಯಿಪಟ್ಟಿ, ಬಿ.ಟಿ. ತಾಳಿ, ಸುರೇಶ ಹಳ್ಳಿಕೇರಿ, ಡಾ. ಎಲ್.ಎಸ್. ಗೌರಿ, ಗುರುಪಾದಪ್ಪ ಬೆಲ್ಲದ, ಆರ್.ಎಸ್. ಮಠದ, ಜೆ.ಎ. ಪಾಟೀಲ, ಈಶ್ವರ ಬೆಟಗೇರಿ, ಶರಣಪ್ಪ ಅರಮನಿ, ಮಲ್ಲಯ್ಯ ಗುಂಡಗೋಪುರಮಠ, ಸಂಗಮೇಶ ಮೆಣಸಗಿ, ಉಮೇಶ ಮೇಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪ್ರಾಚಾರ್ಯ ಶಿವಾನಂದ ಗೋಗೇರಿ ಸ್ವಾಗತಿಸಿದರು. ಎಂ.ಎಸ್. ಧಡೇಸೂರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಪಿ. ವೀರಸಣ್ಣವರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



> ಹಬ್ಬವೆಂದರೆ ಕೇವಲ ಸಡಗರ-ಸಂಭ್ರಮವಲ್ಲ. ಅದರ ಹಿಂದೆ ನಮ್ಮ ಪೂರ್ವಜರು ಅಳವಡಿಸಿಕೊಂಡಿರುವ ಆಧ್ಯಾತ್ಮಿಕ, ಸಾಂಸ್ಕೃತಿಕ ಹಾಗೂ ವೈಜ್ಞಾನಿಕ ಚಿಂತನೆಗಳಿವೆ. ನಮ್ಮ ಹಬ್ಬಗಳು ಜೀವನಶೈಲಿಯೊಂದಿಗೆ ಬೆಸೆದುಕೊಂಡಿದ್ದು, ಪ್ರತಿಯೊಂದು ಆಚರಣೆಯ ಹಿಂದೆಯೂ ಒಂದು ಉದ್ದೇಶವಿದೆ. ಋತುಮಾನಕ್ಕೆ ಅನುಗುಣವಾಗಿ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಆರೋಗ್ಯ ಕಾಪಾಡಿಕೊಳ್ಳುವ ಜ್ಞಾನವನ್ನು ನಮ್ಮ ಹಿರಿಯರು ಹಬ್ಬಗಳ ಆಚರಣೆಯಲ್ಲಿ ಅಳವಡಿಸಿದ್ದರು.
>
> - ಎಸ್.ಬಿ. ದೊಡ್ಡಣ್ಣವರ, ಮುಖ್ಯಶಿಕ್ಷಕ

---

# ವೀರಭದ್ರೇಶ್ವರ ದೇವಸ್ಥಾನದಲ್ಲಿ ಸಾಮೂಹಿಕ ಗುಗ್ಗಳೋತ್ಸವ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿನ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಉಚಿತ ಸಾಮೂಹಿಕ ಗುಗ್ಗಳೋತ್ಸವವು ವಿಜೃಂಭಣೆಯಿಂದ ಹಾಗೂ ಭಕ್ತಿಭಾವದಿಂದ ಜರುಗಿತು.

ಕಳೆದ ಸುಮಾರು 10 ವರ್ಷಗಳಿಂದ ದೇವಸ್ಥಾನದಲ್ಲಿ ಗುಗ್ಗಳೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಿಕೊಂಡು ಬರಲಾಗುತ್ತಿದ್ದು, ಈ ಬಾರಿ ಏಳು ಕುಟುಂಬಗಳ ಗುಗ್ಗಳ ಸೇವೆ ನೆರವೇರಿಸಲಾಯಿತು.

ಶ್ರೀ ವೀರಭದ್ರನ ಉಡುಪಾದ ಕಾಶಿ ಧರಿಸಿದ ಬಾಲ ಪುರವಂತರ ನೃತ್ಯ ಹಾಗೂ ವಡುಪು ಹೇಳುವ ವಿಶಿಷ್ಟ ಶೈಲಿ ನೆರೆದಿದ್ದ ಭಕ್ತರ ಗಮನ ಸೆಳೆಯಿತು. ವೀರ ಪುರವಂತರ ಕಾಶಿ ಧರಿಸಿದ ಅಲಂಕಾರದಲ್ಲಿ ಶ್ರೀ ವೀರಭದ್ರಸ್ವಾಮಿಯು ಕಂಗೊಳಿಸುತ್ತಿದ್ದು, ಇಡೀ ದೇವಸ್ಥಾನ ಆವರಣ ಭಕ್ತಿಮಯ ವಾತಾವರಣದಿಂದ ತುಂಬಿತ್ತು.

ಕಾರ್ಯಕ್ರಮದ ಆರಂಭದಲ್ಲಿ ಗುಗ್ಗಳದ ಹಿನ್ನೆಲೆ, ಅದರ ಪರಂಪರೆ ಹಾಗೂ ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವದ ಕುರಿತು ಶರತ್ ಘಾರ್ಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಘವೇಂದ್ರ ಯಳವತ್ತಿ ಕಾರ್ಯಕ್ರಮ ನಿರೂಪಿಸಿದರು.

ಗುಗ್ಗಳೋತ್ಸವದಲ್ಲಿ ಶ್ರೀ ವೀರಭದ್ರೇಶ್ವರ ಸದ್ಭಕ್ತ ಮಂಡಳಿಯ ಸರ್ವ ಸದಸ್ಯರು ವಿವಿಧ ಸೇವೆಗಳಲ್ಲಿ ತೊಡಗಿಸಿಕೊಂಡು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

ಕಾರ್ಯಕ್ರಮದ ಬಳಿಕ ಸಮಸ್ತ ಭಕ್ತಾದಿಗಳಿಗೆ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ದಾವಣಗೆರೆಯ ಶ್ರೀ ಪ್ರಭು ರಾಮಚಂದ್ರ ಪುರಂತರ ಪರಿವಾರದವರು ಅನ್ನಪ್ರಸಾದ ಸೇವೆ ನೆರವೇರಿಸಿದರು.

ಧಾರ್ಮಿಕ ಪರಂಪರೆ, ಭಕ್ತಿ ಹಾಗೂ ಸಾಮಾಜಿಕ ಸೌಹಾರ್ದತೆಯನ್ನು ಸಾರಿದ ಸಾಮೂಹಿಕ ಗುಗ್ಗಳೋತ್ಸವವು ಭಕ್ತಾದಿಗಳಿಗೆ ವಿಶೇಷ ಆಧ್ಯಾತ್ಮಿಕ ಅನುಭವ ನೀಡುವ ಮೂಲಕ ಯಶಸ್ವಿಯಾಗಿ ಸಂಪನ್ನಗೊಂಡಿತು.

---

# ಅಂಗನವಾಡಿಯಲ್ಲಿ ಎಲ್‌ಕೆಜಿ-ಯುಕೆಜಿ ಪ್ರಾರಂಭ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ, ನರಗುಂದ ಇವರ ವತಿಯಿಂದ ಅಂಗನವಾಡಿ ಕೇಂದ್ರಗಳನ್ನು ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳನ್ನಾಗಿ ಅಭಿವೃದ್ಧಿಪಡಿಸುವ ಕಾರ್ಯಕ್ರಮದಡಿ ನಗರದ ಅಧ್ಯಾಪಕ ನಗರದ ನರಗುಂದ-84ನೇ ಅಂಗನವಾಡಿ ಕೇಂದ್ರದಲ್ಲಿ ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳ ಪ್ರಾರಂಭೋತ್ಸವ ಹಾಗೂ ಪೋಷಣ್ ಅಭಿಯಾನದ ಸಮುದಾಯ ಆಧಾರಿತ ಕಾರ್ಯಕ್ರಮ ಜರುಗಿತು.

ಸರಸ್ವತಿ ಪೂಜೆ ಹಾಗೂ ಸಸಿಗೆ ನೀರುಣಿಸುವ ಮೂಲಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಪ್ಪ ಗಿರಿತಿಮ್ಮಣ್ಣವರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮೇಲ್ವಿಚಾರಕಿ ಶಕುಂತಲಾ ಗಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಅಂಗನವಾಡಿ ಕೇಂದ್ರಗಳಲ್ಲಿ ಬಡ ಮಕ್ಕಳಿಗೆ ಗುಣಮಟ್ಟದ ಆರಂಭಿಕ ಶಿಕ್ಷಣ ನೀಡುವ ಉದ್ದೇಶದಿಂದ ಎಲ್‌ಕೆಜಿ ಹಾಗೂ ಯುಕೆಜಿ ತರಗತಿಗಳನ್ನು ಆರಂಭಿಸಲಾಗುತ್ತಿದ್ದು, ಇದು ಮಕ್ಕಳು ಹಾಗೂ ಪೋಷಕರಿಗೆ ಹೆಚ್ಚು ಪ್ರಯೋಜನಕಾರಿಯಾಗಿದೆ ಎಂದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೆಂಕಪ್ಪ ಗಿರಿತಿಮ್ಮಣ್ಣವರ ಮಾತನಾಡಿ, ಇಲಾಖೆಯ ನಿರ್ದೇಶನದಂತೆ ಅಂಗನವಾಡಿ ಕೇಂದ್ರಗಳನ್ನು ಸರ್ಕಾರಿ ಮಾಂಟೆಸ್ಸರಿ ಶಾಲೆಗಳ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ನವೀನ ಮಾದರಿಯ ಶಾಲಾ ಪೂರ್ವ ಶಿಕ್ಷಣ, ಟಿ.ವಿ. ಮೂಲಕ ಮನರಂಜನೆಯೊಂದಿಗೆ ಕಲಿಕೆ, ಸಮವಸ್ತ್ರಧಾರಿತ ಶಿಕ್ಷಣ, ಶಿಸ್ತು ಹಾಗೂ ಸಮಯ ಪಾಲನೆಗೆ ಆದ್ಯತೆ ನೀಡುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ತಿಳಿಸಿದರು.

ಇದರ ಮೂಲಕ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸುವ ಬದಲು ಸರ್ಕಾರಿ ಅಂಗನವಾಡಿ ಕೇಂದ್ರಗಳಲ್ಲಿಯೇ ಗುಣಮಟ್ಟದ ಆರಂಭಿಕ ಶಿಕ್ಷಣ ನೀಡಲು ಉತ್ತೇಜನ ದೊರೆಯಲಿದೆ ಎಂದರು.

ನಿವೃತ್ತ ಶಿಕ್ಷಕ ಎಸ್.ವೈ. ಹುನಗುಂಡಿ ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಪಾತ್ರ ಸಮಾಜದಲ್ಲಿ ಅತ್ಯಂತ ಮಹತ್ವದ್ದಾಗಿದೆ. ಹಲವು ಹೆಚ್ಚುವರಿ ಜವಾಬ್ದಾರಿಗಳ ನಡುವೆಯೂ ಮಕ್ಕಳ ಪಾಲನೆ, ಪೋಷಣೆ ಹಾಗೂ ಅಭಿವೃದ್ಧಿಗಾಗಿ ಅವರು ಶ್ರಮಿಸುತ್ತಿದ್ದು, ಅಂಗನವಾಡಿ ಸಿಬ್ಬಂದಿಯ ಸೇವೆಗೆ ಸೂಕ್ತ ಗೌರವ ದೊರೆಯಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪ್ರಥಮ ಬಾರಿಗೆ ಗರ್ಭಿಣಿಯಾಗಿರುವ ಮಹಿಳೆಯರ ಸೀಮಂತ ಕಾರ್ಯಕ್ರಮವೂ ಜರುಗಿತು.

ಮುಖ್ಯ ಅತಿಥಿಗಳಾಗಿ ಡಾ. ಜೆ.ಎಸ್. ನುಗ್ಗಾನಟ್ಟಿ, ಪಿ.ಟಿ. ಸೂರ್ಯವಂಶಿ, ಎಂ.ಕೆ. ಹಿರೇಗೌಡ್ರ, ಟಿ.ಆರ್. ಉಳ್ಳಾಗಡ್ಡಿ, ಎನ್.ಕೆ. ಬ್ಯಾಳಿ, ಎಸ್.ವೈ. ಹುನಗುಂಡಿ, ಪೋಷಣ್ ಅಭಿಯಾನದ ತಾಲೂಕು ಸಂಯೋಜಕ ಮಂಜುನಾಥ ಗುಗ್ಗರಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಹಾಗೂ ಪೋಷಕರು ಭಾಗವಹಿಸಿದ್ದರು.

ಕಮಲಾ ಹಿರೇಮಠ ಕಾರ್ಯಕ್ರಮ ನಿರೂಪಿಸಿ ವರಿದಿಸಿದರು.

---

# ಓದಿನೊಂದಿಗೆ ಕ್ರೀಡೆಯಲ್ಲೂ ಸಾಧನೆ ಅಗತ್ಯ: ವೈ.ಎಸ್. ಹುನಗುಂದ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣದೊಂದಿಗೆ ಕ್ರೀಡಾ ಕ್ಷೇತ್ರದಲ್ಲಿಯೂ ಉತ್ತಮ ಸಾಧನೆ ಮಾಡಿದರೆ ಉತ್ತಮ ಉದ್ಯೋಗಾವಕಾಶಗಳನ್ನು ಪಡೆದು ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದು ಹಿರಿಯ ದೈಹಿಕ ಶಿಕ್ಷಣ ಉಪನ್ಯಾಸಕ ವೈ.ಎಸ್. ಹುನಗುಂದ ಹೇಳಿದರು.

ನಗರದ ತೋಂಟದ ಸಿದ್ಧೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚೆಗೆ ಆಯೋಜಿಸಿದ್ದ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಕೇವಲ ಹೆಚ್ಚಿನ ಅಂಕಗಳನ್ನು ಗಳಿಸಿದರೆ ಮಾತ್ರ ಉತ್ತಮ ಉದ್ಯೋಗ ದೊರೆಯುತ್ತದೆ ಎಂಬ ಭಾವನೆ ಹೊಂದಬಾರದು. ಶಿಕ್ಷಣದ ಜತೆಗೆ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಉತ್ತಮ ಸಾಧನೆ ಮಾಡಿದರೆ ಉನ್ನತ ಹುದ್ದೆಗಳನ್ನು ಪಡೆಯಲು ಹೆಚ್ಚಿನ ಅವಕಾಶಗಳು ದೊರೆಯಲಿವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ವೈ.ಎಸ್. ಮತ್ತೂರ ಮಾತನಾಡಿ, ಮಕ್ಕಳ ದೇಹ ಸದೃಢವಾಗಿದ್ದರೆ ಮಾತ್ರ ಅವರ ಮನಸ್ಸೂ ಸದೃಢವಾಗಿರಲು ಸಾಧ್ಯ.

ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಶಿಸ್ತು, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವವನ್ನು ಬೆಳೆಸುತ್ತವೆ ಎಂದು ಹೇಳಿದರು.

ವಿದ್ಯಾರ್ಥಿಗಳು ಕ್ರೀಡಾಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಕರಾದ ಎಫ್.ಆರ್. ದೊಡ್ಡಣ್ಣವರ, ವೀರೇಶ ಸೂಡಿ, ನಾಗರಾಜ ತಳವಾರ, ಕಾರ್ತಿಕ ಪೊಲೀಸ್‌ಪಾಟೀಲ, ವಿದ್ಯಾರ್ಥಿ ಕಾರ್ಯದರ್ಶಿಗಳಾದ ಕುಮಾರಿ ಶಶಿಕಲಾ ಡಂಬಳ, ದರ್ಶನ ಆವ್ಮೆ ಹಾಗೂ ಜ್ಯೋತಿಕಾ ಮಸ್ಕಿ ಉಪಸ್ಥಿತರಿದ್ದರು.

ಪ್ರತಿಭಾ ನಾಯ್ಕಲ್ ಹಾಗೂ ಸಂಗಡಿಗರ ವಚನ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಕಾಲೇಜಿನ ಕ್ರೀಡಾ ಕಾರ್ಯಾಧ್ಯಕ್ಷ ಎನ್.ವಿ. ಕಡಗದ ಸ್ವಾಗತಿಸಿದರು. ಭಾಗ್ಯಲಕ್ಷ್ಮೀ ಚವಡಿ ವಂದಿಸಿದರು. ಪ್ರತಿಭಾ ಪಟ್ಟೇದ ಕಾರ್ಯಕ್ರಮ ನಿರೂಪಿಸಿದರು.



> ಶಿಕ್ಷಣದ ಜತೆಗೆ ಕ್ರೀಡೆ ಹಾಗೂ ಇತರ ಪ್ರತಿಭೆಗಳಲ್ಲೂ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉತ್ತಮ ಅವಕಾಶಗಳು ದೊರೆಯುತ್ತವೆ. ಆದ್ದರಿಂದ ವಿದ್ಯಾರ್ಥಿಗಳು ಸರ್ವತೋಮುಖ ಅಭಿವೃದ್ಧಿಯತ್ತ ಗಮನಹರಿಸಬೇಕು.
>
> - ವೈ.ಎಸ್. ಹುನಗುಂದ

---

### ಯುವ ಮುಖಂಡ ಅನಿಲ ಮೆಣಸಿನಕಾಯಿಗೆ ರಾಖಿ ಕಟ್ಟಿ ವಿಶಿಷ್ಟ ರಕ್ಷಾ ಬಂಧನ ಆಚರಣೆ

# ಒಂದು ಕರೆಗೆ ಸಾವಿರಾರು ಮಹಿಳೆಯರ ಸ್ಪಂದನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸಹೋದರ-ಸಹೋದರಿಯರ ಪ್ರೀತಿ, ವಿಶ್ವಾಸ, ಆತ್ಮೀಯತೆ ಹಾಗೂ ರಕ್ಷಣೆಯ ಪವಿತ್ರ ಬಾಂಧವ್ಯವನ್ನು ಸಾರುವ ರಕ್ಷಾ ಬಂಧನ ಹಬ್ಬವನ್ನು ಯುವ ಮುಖಂಡ ಅನಿಲ ಮೆಣಸಿನಕಾಯಿ ಅವರ ನೇತೃತ್ವದಲ್ಲಿ ವಿಶಿಷ್ಟ ಹಾಗೂ ಅದ್ದೂರಿಯಾಗಿ ಆಚರಿಸಲಾಯಿತು. ಅನಿಲ ಮೆಣಸಿನಕಾಯಿ ಅವರ ಒಂದು ಕರೆಗೆ ಅಪಾರ ಸ್ಪಂದನೆ ವ್ಯಕ್ತವಾಗಿದ್ದು, ಸಾವಿರಾರು ಮಹಿಳೆಯರು ಕಾರ್ಯಕ್ರಮಕ್ಕೆ ಆಗಮಿಸಿ ಅವರಿಗೆ ರಾಖಿ ಕಟ್ಟಿ ಶುಭಾಶಯ ಕೋರಿದರು.

ಅವಳಿ ನಗರದ ವಿವಿಧ ಭಾಗಗಳಿಂದ ಆಗಮಿಸಿದ್ದ ಮಹಿಳೆಯರು ಸಂಭ್ರಮದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅನಿಲ ಮೆಣಸಿನಕಾಯಿ ಅವರ ಕೈಗೆ ರಾಖಿ ಕಟ್ಟಿ ಸಹೋದರತ್ವದ ಬಾಂಧವ್ಯವನ್ನು ಗಟ್ಟಿಗೊಳಿಸಿದರು.

ಅವಳಿ ನಗರದ ಪ್ರಜ್ಞಾವಂತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅನಿಲ ಮೆಣಸಿನಕಾಯಿ ಅವರಿಗೆ ರಾಖಿ ಕಟ್ಟಿ ಶುಭ ಹಾರೈಸಿದರು. ಮಹಿಳೆಯರ ಅಭೂತಪೂರ್ವ ಸ್ಪಂದನೆ ಹಾಗೂ ಬಿಜೆಪಿ ಕಾರ್ಯಕರ್ತರ ಉತ್ಸಾಹಭರಿತ ಪಾಲ್ಗೊಳ್ಳುವಿಕೆ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಪರಿಣಮಿಸಿತು.



ಒಂದೇ ವೇದಿಕೆಯಲ್ಲಿ ಸಾವಿರಾರು ಮಹಿಳೆಯರು ಸೇರಿ ರಾಖಿ ಕಟ್ಟುವ ಮೂಲಕ ಯುವ ಮುಖಂಡನ ಮೇಲಿನ ತಮ್ಮ ಪ್ರೀತಿ, ವಿಶ್ವಾಸ ಮತ್ತು ಅಭಿಮಾನವನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಬಿಜೆಪಿ ಕಾರ್ಯಕರ್ತರು ಮತ್ತು ಮಹಿಳೆಯರ ಸಂಭ್ರಮದ ಪಾಲ್ಗೊಳ್ಳುವಿಕೆಯಿಂದ ರಕ್ಷಾ ಬಂಧನ ಆಚರಣೆ ಅತ್ಯಂತ ಯಶಸ್ವಿಯಾಗಿ ನೆರವೇರಿತು.

ಈ ಸಂದರ್ಭದಲ್ಲಿ ಮಹಿಳೆಯರ ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಯುವ ಮುಖಂಡ ಅನಿಲ ಮೆಣಸಿನಕಾಯಿ, ರಾಖಿ ಎಂಬುದು ಕೇವಲ ದಾರದ ಬಂಧನವಲ್ಲ, ಅದು ಸಹೋದರ-ಸಹೋದರಿಯರ ನಡುವಿನ ಪ್ರೀತಿ, ವಿಶ್ವಾಸ ಹಾಗೂ ರಕ್ಷಣೆಯ ಪವಿತ್ರ ಸಂಕೇತವಾಗಿದೆ.

ಸಾವಿರಾರು ತಾಯಂದಿರು ಮತ್ತು ಸಹೋದರಿಯರು ನೀಡಿರುವ ಈ ಪ್ರೀತಿ ಹಾಗೂ ಆಶೀರ್ವಾದವನ್ನು ಸದಾ ಗೌರವದಿಂದ ಕಾಣುತ್ತೇನೆ. ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಸ್ನೇಹಿತರ ಹಾಗೂ ಅಭಿಮಾನಿಗಳ ಪ್ರೀತಿ ಮತ್ತು ಸಹಕಾರವೂ ಅವಿಸ್ಮರಣೀಯ ಎಂದು ಹೇಳಿದರು.

---

# ಬಿಜೆಪಿ ಮಹಿಳಾ ಮೋರ್ಚಾದಿಂದ ರಕ್ಷಾಬಂಧನ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಮಹಿಳಾ ಮೋರ್ಚಾ ಗದಗ ನಗರ ಮಂಡಲ ವತಿಯಿಂದ ರಕ್ಷಾಬಂಧನ ಹಬ್ಬವನ್ನು ಪೌರಕಾರ್ಮಿಕರು ಹಾಗೂ ಶಿಕ್ಷಕರೊಂದಿಗೆ ವಿಶಿಷ್ಟವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಮೋರ್ಚಾ ಗದಗ ನಗರ ಮಂಡಲ ಅಧ್ಯಕ್ಷೆ ಸ್ವಾತಿ ಅಕ್ಕಿ ವಹಿಸಿ ಮಾತನಾಡಿ, ಊರು ಹಾಗೂ ಬೀದಿಗಳನ್ನು ಸ್ವಚ್ಛವಾಗಿಟ್ಟುಕೊಂಡು ಸಾರ್ವಜನಿಕರ ಆರೋಗ್ಯ ಕಾಪಾಡುವ ಪೌರಕಾರ್ಮಿಕರು ಸಮಾಜದ ನಿಜವಾದ ರಕ್ಷಕರಾಗಿದ್ದಾರೆ ಎಂದು ಹೇಳಿದರು. ಸಮಾಜಕ್ಕಾಗಿ ಹಗಲಿರುಳು ಶ್ರಮಿಸುವ ಪೌರಕಾರ್ಮಿಕ ಬಂಧುಗಳಿಗೆ ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಾರ್ಗದರ್ಶನ ನೀಡುವ ಶಿಕ್ಷಕರಿಗೆ ಗೌರವದ ರಾಖಿ ಕಟ್ಟಿ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ ರಕ್ಷಾಬಂಧನ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಸಮಾಜವನ್ನು ಸನ್ಮಾರ್ಗದಲ್ಲಿ ಮುನ್ನಡೆಸುವ ಶಿಕ್ಷಕರು ಹಾಗೂ ಸಾರ್ವಜನಿಕರ ಆರೋಗ್ಯ ಮತ್ತು ಸ್ವಚ್ಛತೆಗಾಗಿ ನಿರಂತರ ಸೇವೆ ಸಲ್ಲಿಸುವ ಪೌರಕಾರ್ಮಿಕರೊಂದಿಗೆ ರಕ್ಷಾಬಂಧನ ಆಚರಿಸುತ್ತಿರುವುದು ವಿಶೇಷ ಹಾಗೂ ಅರ್ಥಪೂರ್ಣ ಕಾರ್ಯಕ್ರಮವಾಗಿದೆ ಎಂದರು.

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ ಹಾಗೂ ವಿದ್ಯಾವತಿ ಗಡಗಿ ಮಾತನಾಡಿ, ಉತ್ತಮ ಶಿಕ್ಷಕರು ಕೇವಲ ಪಾಠ ಕಲಿಸುವುದಲ್ಲದೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ ಅವರ ಜೀವನ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ. ಇಂತಹ ಶಿಕ್ಷಕರೊಂದಿಗೆ ರಕ್ಷಾಬಂಧನ ಆಚರಿಸುವುದು ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಂ.ಎಸ್. ಕರಿಗೌಡ್ರ, ಶ್ರೀಪತಿ ಉಡುಪಿ, ನಗರ ಮಂಡಲ ಅಧ್ಯಕ್ಷ ಸುರೇಶ್ ಮರಳಪ್ಪನವರ, ಅನಿಲ ಅಬ್ಬಿಗೇರಿ, ಚೆನ್ನಮ್ಮ ಹುಳಕಣ್ಣವರ, ಅಮರನಾಥ ಗಡಗಿ, ಪ್ರೀತಿ ಶಿವಪ್ಪನಮಠ, ವಂದನಾ ವರ್ಣೇಕರ್, ಅಶ್ವಿನಿ ಜಗತಾಪ, ಮೇಘನಾ ಕೊಟ್ಟೂರ, ಗೀತಾ ಅಣ್ಣಿಗೇರಿ, ಶೈಲಾ ಜೋಸೆಫ್, ಮಹಾಲಕ್ಷ್ಮಿ ಶಿರಸಿಪಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ನಗರ ಮಂಡಲ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಪುಷ್ಪಾ ಪೂಜಾರ ಕಾರ್ಯಕ್ರಮ ನಿರೂಪಿಸಿದರು.

## ಲಕ್ಷ್ಮೇಶ್ವರದಲ್ಲಿ ರಾಘವೇಂದ್ರ ಸ್ವಾಮಿಗಳ ಆರಾಧನೆ ಸಂಪನ್ನ

# ಭಕ್ತಿ–ಜ್ಞಾನದ ದಾರಿದೀಪ ಗುರುಸಾರ್ವಭೌಮರು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ನಡೆದ ಮೂರು ದಿನಗಳ ಆರಾಧನಾ ಮಹೋತ್ಸವದ ಸಮಾರೋಪದ ಅಂಗವಾಗಿ ಸೋಮವಾರ ರಾಯರ ರಥೋತ್ಸವ ವಿಜೃಂಭಣೆಯಿಂದ ಜರುಗಿತು. ನೂರಾರು ಭಕ್ತರ ವೇದಘೋಷ, ವಾದ್ಯವೈಭವ ಹಾಗೂ ಭಕ್ತಿ ಸಂಗೀತದ ನಡುವೆ ನಡೆದ ರಥೋತ್ಸವದಲ್ಲಿ ಭಕ್ತರು ತಾಳಕ್ಕೆ ಹೆಜ್ಜೆ ಹಾಕುತ್ತ ರಥವನ್ನು ಎಳೆದು ಸಂಭ್ರಮಿಸಿದರು. ಈ ವೇಳೆ ಮಾತನಾಡಿದ ಶ್ರೀಮಠದ ಧರ್ಮದರ್ಶಿ ಹನುಮಂತಾಚಾರ್ಯ ಹೊಂಬಳ, ಶ್ರೀ ರಾಘವೇಂದ್ರ ಗುರುಸಾರ್ವಭೌಮರು ಭಕ್ತಿ, ಜ್ಞಾನ, ಧರ್ಮನಿಷ್ಠೆ ಹಾಗೂ ಸದಾಚಾರದ ದಾರಿದೀಪವಾಗಿದ್ದಾರೆ. ಅವರ ಆರಾಧನೆ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ, ಅವರು ತೋರಿದ ಧರ್ಮಮಾರ್ಗವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪವಾಗಬೇಕು ಎಂದರು.

ರಾಘವೇಂದ್ರ ಸ್ವಾಮಿಗಳು ಪ್ರಹ್ಲಾದರಾಜರಾಗಿ, ಬಳಿಕ ವ್ಯಾಸರಾಜರಾಗಿ ಭಕ್ತಿ–ಜ್ಞಾನವನ್ನು ಪ್ರಸಾರ ಮಾಡಿ, ರಾಘವೇಂದ್ರ ತೀರ್ಥರಾಗಿ ಭಕ್ತರನ್ನು ಅನುಗ್ರಹಿಸುತ್ತಿದ್ದಾರೆ ಎಂದು ತಿಳಿಸಿದರು.

ರಥೋತ್ಸವದ ಬಳಿಕ ಶ್ರೀಮಠದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರಾಧನಾ ಮಹೋತ್ಸವಕ್ಕೆ ಸೇವೆ ಸಲ್ಲಿಸಿದ ಮಹನೀಯರನ್ನು ಗೌರವಿಸಲಾಯಿತು.

ಸಮಾಜದ ಹಿರಿಯ ಮುಖಂಡ ಕೃಷ್ಣ ಕುಲಕರ್ಣಿ ಮಾತನಾಡಿ, ನಂಬಿದ ಭಕ್ತರನ್ನು ರಾಯರು ಕೈಬಿಟ್ಟ ಉದಾಹರಣೆಗಳಿಲ್ಲ. 306 ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಈ ಮಠದಲ್ಲಿ ಎಲ್ಲ ಸಮಾಜ ಬಾಂಧವರ ಸಹಕಾರದಿಂದ ಆರಾಧನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ. ಸೇವೆ ಸಲ್ಲಿಸುವವರಿಗೆ ರಾಯರು ಇಷ್ಟಾರ್ಥಗಳನ್ನು ಈಡೇರಿಸಲಿ ಎಂದು ಆಶಿಸಿದರು. ಶನಿವಾರದಿಂದಲೇ ನೂರಾರು ಭಕ್ತರು ಶ್ರೀಮಠಕ್ಕೆ ಆಗಮಿಸಿ ರಾಯರ ದರ್ಶನ ಪಡೆದರು. ಹೊಂಬಳ ಮನೆತನದವರಿಂದ ಪೂಜಿಸಲ್ಪಡುತ್ತಿರುವ ಈ ಮಠದ ಆರಾಧನಾ ಮಹೋತ್ಸವ ವರ್ಷದಿಂದ ವರ್ಷಕ್ಕೆ ವೈಭವ ಪಡೆಯುತ್ತಿದೆ. ವಿವಿಧ ಪುಷ್ಪಗಳಿಂದ ಅಲಂಕರಿಸಲ್ಪಟ್ಟ ರಾಯರ ವೃಂದಾವನದ ದರ್ಶನ ಪಡೆದ ಭಕ್ತರು ಕಣ್ತುಂಬಿಕೊಂಡರು.

ಈ ವೇಳೆ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನಿಸ್, ಚಂಬಣ್ಣ ಬಾಳಿಕಾಯಿ, ಸಿ.ಆರ್. ಲಕ್ಕುಂಡಿಮಠ, ಮಹೇಶ ಹೊಗೆಸೊಪ್ಪಿನ, ಶರಣು ಗೋಡಿ, ನೀಲಪ್ಪ ಕರ್ಜೆಕಣ್ಣವರ, ಎ.ಪಿ. ಕುಲಕರ್ಣಿ, ವೆಂಕಟೇಶ ಗುಡಿ, ಗುರುರಾಜ ಪಾಟೀಲಕುಲಕರ್ಣಿ, ವೇದವ್ಯಾಸ ಹೊಂಬಳ, ಡಿ.ಪಿ. ಹೇಮಾದ್ರಿ, ಅರವಿಂದ ದೇಶಪಾಂಡೆ, ಮನೋಜ ಹೊಂಬಳ, ದಿಗಂಬರ ಪೂಜಾರ, ಅನಿಲ ಕುಲಕರ್ಣಿ, ಬಾಬು ಅಳವಂಡಿ, ಶ್ರೀಪಾದರಾಜ ಹೊಂಬಳ, ಗುರುರಾಜ ಸುಳ್ಳದ, ಪ್ರಾಣೇಶ ಬೆಳ್ಳಟ್ಟಿ, ಗಂಗಾಧರ ಮ್ಯಾಗೇರಿ, ಕಿರಣ ನವಲೆ, ರಾಮು ಪೂಜಾರ, ರಾಘವೇಂದ್ರ ಗೊಗ್ಗಿ, ನಾಗರಾಜ ಪೂಜಾರ, ಕೃಷ್ಣಕುಮಾರ ಕುಲಕರ್ಣಿ, ಬಿ.ಕೆ. ಕುಲಕರ್ಣಿ, ಶ್ರೀನಿವಾಸ ಹುಲಮನಿ, ಶ್ರೀಕಾಂತ ಪೂಜಾರ, ಡಾ. ಪ್ರಸನ್ನ ಕುಲಕರ್ಣಿ, ಗಂಗಾಧರ ಗೋಡಿ, ರಮೇಶ ತೊರಗಲ್, ರವೀಂದ್ರ ರಾಯಚೂರ, ನಿಂಗಪ್ಪ ತಹಸೀಲ್ದಾರ, ಬಸವರಾಜ ಚಕ್ರಸಾಲಿ, ಗಂಗಾಧರ ಹಳ್ಳಿಕೇರಿ, ರಾಘವೇಂದ್ರ ಮಿಸ್ಕಿನ್, ವೆಂಕಟೇಶ ಮಾತಾಡೆ ಸೇರಿದಂತೆ ವಿವಿಧ ಮುಖಂಡರು, ಗಣ್ಯರು ಹಾಗೂ ನೂರಾರು ಮಹಿಳೆಯರು ಮತ್ತು ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

> ಗುರುವಿನ ಆರಾಧನೆಯ ನಿಜವಾದ ಅರ್ಥ ಅವರ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವುದರಲ್ಲಿದೆ. ದುಷ್ಟ ಗುಣಗಳನ್ನು ತ್ಯಜಿಸಿ ಹರಿಭಕ್ತಿ, ಶಾಸ್ತ್ರನಿಷ್ಠೆ ಹಾಗೂ ಧರ್ಮಮಾರ್ಗದಲ್ಲಿ ಸಾಗಿದಾಗ ಮಾತ್ರ ಗುರುರಾಯರ ಆರಾಧನೆ ಸಾರ್ಥಕವಾಗುತ್ತದೆ.
> - ಹನುಮಂತಾಚಾರ್ಯ

## ಮಾರನಬಸರಿಯಲ್ಲಿ ಅದ್ದೂರಿಯಾಗಿ ಗಡ್ಡಿ ಮಾರುತೇಶ್ವರ ಪಾಲಕಿ ಉತ್ಸವ

# ಜೋಳದ ಸಂಗಟಿಯೇ ನೈವೇದ್ಯ... ಭಾವೈಕ್ಯತೆಯೇ ಆರಾಧನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಒಂದು ಕಡೆ ಭೂಮಿಯಿಂದ ತಾನಾಗಿಯೇ ಉದ್ಭವಿಸಿದ ಜಾಗೃತ ದೈವದ ಮೇಲಿನ ಅಚಲ ನಂಬಿಕೆ... ಇನ್ನೊಂದು ಕಡೆ ರೈತರ ಬೆವರಿನ ಫಲವಾದ ಜೋಳದ ಸಂಗಟಿಯನ್ನೇ ದೇವರಿಗೆ ನೈವೇದ್ಯವಾಗಿ ಅರ್ಪಿಸುವ ವಿಶಿಷ್ಟ ಸಂಪ್ರದಾಯ... ಜಾತಿ–ಮತಗಳ ಬೇಲಿ ಮೀರಿ ಒಂದೇ ಭಕ್ತಿಯ ಭಾವದಲ್ಲಿ ಒಂದಾಗುವ ಜನತೆ...!

ಇದು ಸಮೀಪದ ಮಾರನಬಸರಿ ಗ್ರಾಮದ ಐತಿಹಾಸಿಕ ಗಡ್ಡಿ ಮಾರುತೇಶ್ವರ ಪಾಲಕಿ ಉತ್ಸವದ ವಿಶೇಷತೆ.

ಗ್ರಾಮೀಣ ಜನಪದ ಸಂಸ್ಕೃತಿ, ಶತಮಾನಗಳ ನಂಬಿಕೆ ಹಾಗೂ ರೈತ ಬದುಕಿನ ಸಂಪ್ರದಾಯದ ಸಂಗಮವಾಗಿರುವ ಗಡ್ಡಿ ಮಾರುತೇಶ್ವರನ ವಾರ್ಷಿಕ ಪಾಲಕಿ ಉತ್ಸವವು ಶ್ರಾವಣ ಮಾಸದ ಮೂರನೇ ಶನಿವಾರದಂದು ಶ್ರದ್ಧಾ–ಭಕ್ತಿ ಹಾಗೂ ಸಂಭ್ರಮದಿಂದ ಜರುಗಿತು.

ಗ್ರಾಮದ ದಕ್ಷಿಣ ಭಾಗದ ಹೊಲದಲ್ಲಿರುವ ಗಡ್ಡಿ ಮಾರುತೇಶ್ವರ ಮೂರ್ತಿಯು ಭೂಮಿಯಲ್ಲಿ ತಾನಾಗಿಯೇ ಉದ್ಭವಿಸಿದ ಜಾಗೃತ ದೈವ ಎಂಬುದು ಗ್ರಾಮಸ್ಥರ ನಂಬಿಕೆಯಾಗಿದೆ. ಪೂರ್ವಜರ ಕಾಲದಿಂದಲೂ ಶ್ರಾವಣ ಮಾಸದಲ್ಲಿ ವಿಶೇಷ ಆರಾಧನೆ ನಡೆಸಿಕೊಂಡು ಬರಲಾಗುತ್ತಿದೆ ಎಂದು ಗ್ರಾಮದ ಹಿರಿಯರು ತಿಳಿಸಿದರು.

ಉತ್ಸವದ ಅಂಗವಾಗಿ ರೈತರು ಜೋಳ, ಧಾನ್ಯ, ಕಾಳು–ಕಡಿ ಸೇರಿದಂತೆ ಕೃಷಿ ಉತ್ಪನ್ನಗಳನ್ನು ಕಾಣಿಕೆಯಾಗಿ ಅರ್ಪಿಸಿದರು. ವಿಶೇಷ ಪೂಜೆ ಬಳಿಕ ಜೋಳದ ಸಂಗಟಿ ಹಾಗೂ ಸಾರಿನ ದಾಸೋಹ ನಡೆಯಿತು.

ಅನ್ನಸಂತರ್ಪಣೆಯ ನಂತರ ಆಂಜನೇಯಸ್ವಾಮಿ ದೇವಸ್ಥಾನದಿಂದ ಅಲಂಕೃತ ಪಾಲಕಿ ಹೊರಟು, 'ಡೊಳ್ಳಿನ ಮಜಲು' ವಾದ್ಯ ವೈಭವದೊಂದಿಗೆ ಉದ್ಭವ ಮೂರ್ತಿಯ ಸನ್ನಿಧಾನಕ್ಕೆ ತಲುಪಿತು. ಉತ್ತಮ ಮಳೆ–ಬೆಳೆ, ರೈತರ ಬದುಕಿನಲ್ಲಿ ಸಮೃದ್ಧಿ ಹಾಗೂ ಸಕಲ ಜೀವಿಗಳಿಗೆ ಆರೋಗ್ಯ ದೊರೆಯಲಿ ಎಂದು ಗ್ರಾಮಸ್ಥರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.



### ಭಾವೈಕ್ಯತೆಗೆ ಜೀವಂತ ಸಾಕ್ಷಿಯಾದ ಉತ್ಸವ

ಗಡ್ಡಿ ಮಾರುತೇಶ್ವರನ ವಿಶೇಷ ಪೂಜೆ, ಸಂಗಟಿ ದಾಸೋಹ ಹಾಗೂ ಪಾಲಕಿ ಉತ್ಸವದಲ್ಲಿ ಹಿಂದೂ ಬಾಂಧವರೊಂದಿಗೆ ಮುಸ್ಲಿಂ ಸಮುದಾಯದವರೂ ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡು ಸೇವೆ ಸಲ್ಲಿಸಿದರು. ಜಾತಿ–ಮತಗಳ ಭೇದ ಮರೆತು ಎಲ್ಲರೂ ಒಂದಾಗಿ ಸಂಭ್ರಮಿಸಿದ ಈ ಉತ್ಸವವು ಮಾರನಬಸರಿ ಗ್ರಾಮವನ್ನು ಭಾವೈಕ್ಯತೆ ಹಾಗೂ ಕೋಮು ಸೌಹಾರ್ದತೆಯ ಜೀವಂತ ಸಾಕ್ಷಿಯನ್ನಾಗಿ ಮಾಡಿತು.

> ಪೂರ್ವಜರ ಕಾಲದಿಂದಲೂ ಗಡ್ಡಿ ಮಾರುತೇಶ್ವರನಿಗೆ ವಿಶೇಷ ಆಚರಣೆ ನಡೆಸಿಕೊಂಡು ಬರುತ್ತಿದ್ದೇವೆ. ರೈತರ ಬೆವರಿನೊಂದಿಗೆ ಬೆಳೆದ ಜೋಳದ ಸಂಗಟಿಯೇ ದೇವರಿಗೆ ಪ್ರಮುಖ ನೈವೇದ್ಯ. ಜಾತಿ–ಮತಗಳ ಬೇಲಿ ಮೀರಿ ನಾವೆಲ್ಲರೂ ಒಂದಾಗಿ ಊರು ಹಾಗೂ ನಾಡಿನ ಸಮೃದ್ಧಿಗಾಗಿ ಪ್ರಾರ್ಥಿಸುತ್ತೇವೆ.
> - ಶರಣಪ್ಪ ಕುರಿ, ಗ್ರಾಮದ ಹಿರಿಯ

### ಸಂಕ್ಷಿಪ್ತ ಸುದ್ದಿಗಳು

## ಆಟ–ಪಾಠದೊಂದಿಗೆ ಬದುಕಿನ ಮೌಲ್ಯ ಅರಿಯಿರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ಬಾಲ್ಯ ಹಸನಾಗಲು ಆಟ–ಪಾಠದೊಂದಿಗೆ ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದು ಅಗತ್ಯ ಎಂದು ಚಿಂತಕಿ ಜಯಶ್ರೀ ಉಗಲಾಟದ ಹೇಳಿದರು.

ನಗರದ ಗಂಗಿಮಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಕ್ಕಮಹಾದೇವಿ ಕದಳಿಶ್ರೀ ಮಹಿಳಾ ವೇದಿಕೆಯಿಂದ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ 'ಅಮೃತಭೋಜನ–ಜ್ಞಾನ ಸಿಂಚನ' ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಅವರು ಮಾತನಾಡಿದರು. ಬಾಲ್ಯದಲ್ಲಿಯೇ ಉತ್ತಮ ನಡೆ–ನುಡಿ ಹಾಗೂ ಧನಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು. ಶಾಲಾ ಪಾಠದೊಂದಿಗೆ ಜೀವನ ಪಾಠವೂ ಅಗತ್ಯವಾಗಿದೆ ಎಂದು ಹೇಳಿದರು.

ಚಿಂತಕ ರಮೇಶ ಶಿಗ್ಲಿ ಮಾತನಾಡಿ, ಸಂಗೀತದ ಮೂಲಕ ಕಲಿಕೆಯನ್ನು ಪರಿಣಾಮಕಾರಿಯಾಗಿಸಿಕೊಳ್ಳಬಹುದು. ಮಕ್ಕಳು ಶರಣರು ಹಾಗೂ ದಾರ್ಶನಿಕರ ಜೀವನ ಸಂದೇಶಗಳನ್ನು ತಿಳಿದು ಅನುಸರಿಸಬೇಕು ಎಂದರು. ಚಿಂತಕಿ ಸುಜಾತಾ ಲಕ್ಷ್ಮೇಶ್ವರ ಕಲಿಕಾ ಸಾಮಗ್ರಿಗಳನ್ನು ವಿತರಿಸಿ, ಜೀವನದಲ್ಲಿ ನಿರ್ದಿಷ್ಟ ಗುರಿ ಹೊಂದಿ ಅದನ್ನು ಸಾಧಿಸಲು ಹಿರಿಯರ ಮಾರ್ಗದರ್ಶನ ಪಡೆಯಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಕುಮಾರ ಯಶಸ್ಸಕುಮಾರ ಶಿಗ್ಲಿ ಅವರ ಜನ್ಮದಿನವನ್ನು ಮಕ್ಕಳೊಂದಿಗೆ ಆಚರಿಸಲಾಯಿತು. ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿ.ಎಸ್. ಬೆಳಹಾರ ಸ್ವಾಗತಿಸಿದರು. ಐ.ಡಿ. ಕಬ್ಬೇರಹಳ್ಳಿ ನಿರೂಪಿಸಿದರು. ಆರ್.ಡಿ. ಮಗಜಿ ವರದಿಸಿದರು. ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ಎಂ.ಟಿ. ವಡ್ಡಟ್ಟಿ, ಕವಯಿತ್ರಿ ಹಾಗೂ ಗಾಯಕಿ ಪದ್ಮಾ ಕಬಾಡಿ, ಶಿಕ್ಷಕರು ಹಾಗೂ ಶಾಲೆಯ ಸಿಬ್ಬಂದಿ ಉಪಸ್ಥಿತರಿದ್ದರು.



## 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನಕ್ಕೆ ಸಿದ್ಧತೆ: ಓಂ ಬಿರ್ಲಾ ಅವರೊಂದಿಗೆ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಮಹತ್ವದ ಚರ್ಚೆ

**ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದಕ್ಷಿಣ ಆಫ್ರಿಕಾದ ಕೇಪ್‌ಟೌನ್‌ನಲ್ಲಿ ಸೆಪ್ಟೆಂಬರ್ 13ರಿಂದ 19ರವರೆಗೆ ನಡೆಯಲಿರುವ 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದ ಹಿನ್ನೆಲೆಯಲ್ಲಿ ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷ ಗುರುಪಾದಗೌಡ ಸಂಗನಗೌಡ ಪಾಟೀಲ ಅವರು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರೊಂದಿಗೆ ಮಹತ್ವದ ಚರ್ಚೆ ನಡೆಸಿದರು. ನವದೆಹಲಿಯ ಸಂಸತ್ ಭವನದ ಅನೆಕ್ಸ್‌ನ ಮುಖ್ಯ ಸಮಿತಿ ಕೊಠಡಿಯಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಸಮ್ಮೇಳನದ ಸಿದ್ಧತೆಗಳು, ಸಂಸದೀಯ ವ್ಯವಹಾರಗಳು ಹಾಗೂ ಸಂಸದೀಯ ಸಂಪ್ರದಾಯಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಲಾಯಿತು.

ಕರ್ನಾಟಕದ ನಿಯೋಗವನ್ನು ಮುನ್ನಡೆಸಲಿರುವ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರು, ಕೇಪ್‌ಟೌನ್‌ನಲ್ಲಿ ನಡೆಯಲಿರುವ ಸಮ್ಮೇಳನದಲ್ಲಿ ವಿವಿಧ ಮಹತ್ವದ ವಿಷಯಗಳ ಕುರಿತು ಪರಿಣಾಮಕಾರಿಯಾಗಿ ಭಾಗವಹಿಸುವುದು ಹಾಗೂ ಈ ಸಂಬಂಧ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತು ಲೋಕಸಭಾ ಸ್ಪೀಕರ್ ಅವರೊಂದಿಗೆ ಅಭಿಪ್ರಾಯ ವಿನಿಮಯ ಮಾಡಿಕೊಂಡರು.

ಸಂಸದೀಯ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸಂರಕ್ಷಿಸುವುದು ಹಾಗೂ ಕಾಮನ್‌ವೆಲ್ತ್ ರಾಷ್ಟ್ರಗಳ ನಡುವಿನ ಸಂಸದೀಯ ಸಹಕಾರವನ್ನು ಇನ್ನಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಸಮ್ಮೇಳನದ ಮಹತ್ವದ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ಸಭೆಯಲ್ಲಿ ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನಾರಾಯಣ್ ಸಿಂಗ್, ವಿವಿಧ ರಾಜ್ಯಗಳ ವಿಧಾನಸಭೆಗಳ ಸಭಾಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೌಲಾನಾ ಆಜಾದ್–ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಖಾಲಿ ಹುದ್ದೆ ಭರ್ತಿಗೆ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಮೌಲಾನಾ ಆಜಾದ್ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕ ಮತ್ತು ಶಿಕ್ಷಕೇತರ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡುವಂತೆ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಿಗೆ ಮನವಿ ಸಲ್ಲಿಸಲಾಗುವುದು ಎಂದು ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟೆ ತಿಳಿಸಿದ್ದಾರೆ.

ನಗರದ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಕೇಂದ್ರ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಹಲವಾರು ವರ್ಷಗಳಿಂದ ಮೌಲಾನಾ ಆಜಾದ್ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಶಿಕ್ಷಕ ಹಾಗೂ ಶಿಕ್ಷಕೇತರ ಹುದ್ದೆಗಳು ಖಾಲಿ ಉಳಿದಿವೆ ಎಂದು ಹೇಳಿದರು.

ಹುದ್ದೆಗಳ ಕೊರತೆಯಿಂದ ಶಿಕ್ಷಣದ ಗುಣಮಟ್ಟದ ಮೇಲೆ ಪರಿಣಾಮ ಬೀರುವುದರ ಜತೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೂ ತೊಡಕಾಗುತ್ತಿದೆ. ಮತ್ತೊಂದೆಡೆ, ಅಗತ್ಯ ವಿದ್ಯಾರ್ಹತೆ ಹೊಂದಿರುವ ಅನೇಕ ಪದವೀಧರರು ಉದ್ಯೋಗದ ನಿರೀಕ್ಷೆಯಲ್ಲಿ ಕಾಯುತ್ತಿರುವ ಸಂದರ್ಭದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಅವರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ವಸತಿ ಶಾಲೆಗಳು ಬಡವರು, ಅಲ್ಪಸಂಖ್ಯಾತರು, ಅತ್ಯಂತ ಹಿಂದುಳಿದವರು ಹಾಗೂ ದಲಿತ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಪ್ರಮುಖ ಕೇಂದ್ರಗಳಾಗಿವೆ. ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗದಂತೆ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಖಾಲಿ ಇರುವ ಎಲ್ಲ ಶಿಕ್ಷಕ ಹಾಗೂ ಶಿಕ್ಷಕೇತರ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ವಾತಾವರಣ ಕಲ್ಪಿಸಬೇಕು. ಜತೆಗೆ ವಿದ್ಯಾವಂತ ನಿರುದ್ಯೋಗಿ ಪದವೀಧರರಿಗೆ ಉದ್ಯೋಗದ ಅವಕಾಶ ಒದಗಿಸಬೇಕು ಎಂದು ಮಹ್ಮದಶಫಿ ನಾಗರಕಟ್ಟೆ ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಜಾಫರ ಡಾಲಾಯತ, ಮಹಬೂಬ್ ಬಾದಷಾ ಖಾಜಿ, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹ್ಮದ್ ದೊಡ್ಡಮನಿ, ಕುತುಬುದ್ದೀನ್ ಶೇಖ, ಅಬ್ದುಲರಜಾಕ ಮಂಗಳೂರು, ರಫೀಕ್ ಈಟಿ, ಸಲೀಂ ಕರಡಿ, ಯಾಸೀನ್ ಮುಲ್ಲಾ, ಅಫ್ಜಲ್ ಮನಿಯಾರ್, ಜೋಹರ ಮುಂಡರಗಿ, ಇಮ್ರಾನ್ ತಹಶೀಲ್ದಾರ್, ಮೀರಾಸಾಬ ಇರಕಲ್, ನಿಜಾಮುದ್ದೀನ್ ಕಾಟಾಪುರ, ರಹೀಂಸಾಬ ದೊಡ್ಡಮನಿ, ಸಲೀಂ ನಾಲಬಂದ, ಮಕ್ತುಂ ಹುಸೇನ್ ಜಮಾದಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಯಪ್ಪ ಹತ್ತಿಕಾಳಗೆ ಗೌರವ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮಧ್ಯ ಕರ್ನಾಟಕದ ಅತಿ ದೊಡ್ಡ ಫೋಟೋಗ್ರಾಫಿ ಹಾಗೂ ವಿಡಿಯೋಗ್ರಫಿ ಛಾಯಾಮೇಳವೆಂದು ಗುರುತಿಸಿಕೊಂಡಿರುವ ದೇವನಗರಿ ಪ್ರೊ ಇಮೇಜ್–2026 ಕಾರ್ಯಕ್ರಮವು ದಾವಣಗೆರೆಯಲ್ಲಿ ವಿಜೃಂಭಣೆಯಿಂದ ನಡೆಯಿತು. ಕಾರ್ಯಕ್ರಮದ ಅಂಗವಾಗಿ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕು ಛಾಯಾಗ್ರಾಹಕರ ಸಂಘದ ಉಪಾಧ್ಯಕ್ಷರಾದ ರಾಯಪ್ಪ ಹತ್ತಿಕಾಳ ಅವರನ್ನು ದೇವನಗರಿ ಪ್ರೊ ಇಮೇಜ್ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಛಾಯಾಗ್ರಹಣ ಕ್ಷೇತ್ರದಲ್ಲಿ ಅವರು ಸಲ್ಲಿಸುತ್ತಿರುವ ಸೇವೆ ಹಾಗೂ ಸಂಘಟನಾ ಚಟುವಟಿಕೆಗಳನ್ನು ಗುರುತಿಸಿ ಈ ವಿಶೇಷ ಗೌರವವನ್ನು ನೀಡಲಾಯಿತು. ಈ ಸಂದರ್ಭದಲ್ಲಿ ದೇವನಗರಿ ಪ್ರೊ ಇಮೇಜ್ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದು, ಸನ್ಮಾನಿತರನ್ನು ಅಭಿನಂದಿಸಿದರು. ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಛಾಯಾಗ್ರಾಹಕರ ಸಂಘದ ಜಿಲ್ಲಾಧ್ಯಕ್ಷರಾದ ಪವನ ಕೆ. ಮೇಹರ ವಾಡೆ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ಛಾಯಾಗ್ರಾಹಕರ ಸಂಘಗಳ ಉಪಾಧ್ಯಕ್ಷರಿಗೂ ಗೌರವ ಸನ್ಮಾನ ನೀಡಿ ಅಭಿನಂದಿಸಲಾಯಿತು.

ಗದಗ ಜಿಲ್ಲೆಯ ಛಾಯಾಗ್ರಾಹಕರಿಗೆ ಈ ಪ್ರತಿಷ್ಠಿತ ವೇದಿಕೆಯಲ್ಲಿ ದೊರೆತಿರುವ ಗೌರವವು ಜಿಲ್ಲೆಯ ಛಾಯಾಗ್ರಹಣ ಕ್ಷೇತ್ರಕ್ಕೆ ಮತ್ತಷ್ಟು ಹೆಮ್ಮೆ ತಂದಿದೆ. ದೇವನಗರಿ ಪ್ರೊ ಇಮೇಜ್–2026 ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯ ಛಾಯಾಗ್ರಾಹಕರನ್ನು ಗುರುತಿಸಿ ಗೌರವಿಸಿದ ದೇವನಗರಿ ಪ್ರೊ ಇಮೇಜ್ ಅಧ್ಯಕ್ಷರು ಹಾಗೂ ಸರ್ವ ಸದಸ್ಯರಿಗೆ ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳ ಛಾಯಾಗ್ರಾಹಕರ ಪರವಾಗಿ ಅಭಿನಂದಿಸಲಾಗಿದೆ.



# ಗದಗಕ್ಕೆ ಆಗಮಿಸಿದ ಸಿಎಂ ಡಿ.ಕೆ. ಶಿವಕುಮಾರ್‌ಗೆ ಸ್ವಾಗತ

**ವಿಜಯಸಾಕ್ಷಿ ಸುದ್ದಿ, ಗದಗ**

ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಗದಗ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಹೆಲಿಪ್ಯಾಡ್‌ಗೆ ಆಗಮಿಸಿದರು. ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಹೆಲಿಪ್ಯಾಡ್‌ಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ, ಶಾಸಕ ಡಾ. ಎಚ್.ಕೆ. ಪಾಟೀಲ, ಶಾಸಕ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಡಿ.ಆರ್. ಪಾಟೀಲ, ವಿನಯ ಕುಲಕರ್ಣಿ, ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ಮಾಜಿ ಶಾಸಕ ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ ಸೇರಿದಂತೆ ಮಿಥುನ ಪಾಟೀಲ, ಬಿ.ಬಿ. ಅಸೂಟಿ, ವಾಸಣ್ಣ ಕುರಡಗಿ ಹಾಗೂ ಇತರ ಗಣ್ಯರು ಮತ್ತು ಜನಪ್ರತಿನಿಧಿಗಳು ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಪ್ರಾದೇಶಿಕ ಆಯುಕ್ತೆ ಜಾನಕಿ ಎಸ್., ಐಜಿಪಿ ಸಂದೀಪ್ ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್., ಡಿಸಿಎಫ್ ಸಂತೋಷಕುಮಾರ, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸುರೇಶ್ ನಾಡಗೌಡರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಅಧಿಕಾರಿಗಳು ಉಪಸ್ಥಿತರಿದ್ದರು.

# ಸೆ. 19ರಂದು ರಾಷ್ಟ್ರೀಯ ಲೋಕ ಅದಾಲತ್

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ನಿರ್ದೇಶನದನ್ವಯ ಗದಗ ಜಿಲ್ಲೆಯಲ್ಲಿ ಸೆಪ್ಟೆಂಬರ್ 19, 2026ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ಹಾಗೂ ವಿವಿಧ ಪ್ರಕರಣಗಳ ಪಕ್ಷಗಾರರು ಪರಸ್ಪರ ರಾಜೀ ಸಂಧಾನದ ಮೂಲಕ ತಮ್ಮ ವ್ಯಾಜ್ಯಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ ತಿಳಿಸಿದ್ದಾರೆ.

ರಾಜಿ ಸಂಧಾನದಲ್ಲಿ ಪಾಲ್ಗೊಳ್ಳುವುದರಿಂದ ಪ್ರಕರಣಗಳ ಇತ್ಯರ್ಥಕ್ಕೆ ಆಗುವ ಆರ್ಥಿಕ ಹೊರೆ ಹಾಗೂ ಸಮಯದ ವ್ಯರ್ಥವನ್ನು ತಪ್ಪಿಸಬಹುದಲ್ಲದೆ, ಪರಸ್ಪರ ಸಂಬಂಧ ಮತ್ತು ಬಾಂಧವ್ಯವನ್ನು ಉಳಿಸಿಕೊಳ್ಳಲು ಸಹ ಸಾಧ್ಯವಾಗುತ್ತದೆ. ಆದ್ದರಿಂದ ರಾಜಿ ಆಗಲು ಅರ್ಹವಿರುವ ಪ್ರಕರಣಗಳ ಪಕ್ಷಗಾರರು ಲೋಕ ಅದಾಲತ್‌ನ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ. ಗದಗ ಜಿಲ್ಲೆಯಲ್ಲಿ ರಾಜಿ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಂಎಂಆರ್‌ಡಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಾಂಪೌಂಡಬಲ್ ಪ್ರಕರಣಗಳು ಸೇರಿದಂತೆ ವಿವಿಧ ಪ್ರಕರಣಗಳನ್ನು ಗುರುತಿಸಲಾಗಿದೆ.

ರಾಜಿ ಸಂಧಾನಕ್ಕಾಗಿ ಆಯ್ಕೆ ಮಾಡಲಾದ ಪ್ರಕರಣಗಳಿಗೆ ಸಂಬಂಧಿಸಿದ ವಕೀಲರು ಹಾಗೂ ಪಕ್ಷಗಾರರಿಗೆ ಮುಂಚಿತವಾಗಿಯೇ ರಾಜಿ ಸಂಧಾನದಿಂದ ಆಗುವ ಪ್ರಯೋಜನಗಳ ಕುರಿತು ಮಾಹಿತಿ ನೀಡಿ, ಪರಸ್ಪರ ಮಾತುಕತೆಯ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರೋತ್ಸಾಹಿಸಲಾಗುವುದು ಎಂದು ತಿಳಿಸಲಾಗಿದೆ. ಪ್ರಕರಣಗಳಿಗೆ ಸಂಬಂಧಿಸಿದ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಸೆಪ್ಟೆಂಬರ್ 19ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಸವೇಶ್ವರ ನಗರ (ಶಹಪೂರಪೇಟೆ)ದ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆಯುತ್ತಿರುವ ಶ್ರೀ ವೀರಭದ್ರೇಶ್ವರ ಸ್ವಾಮಿಯ 74ನೇ ಹಾಗೂ ಶ್ರೀ ಭದ್ರಕಾಳಿದೇವಿ ಸಮೇತ 3ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಶನಿವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಿ ಜರುಗಿತು.

ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಶಿಬಿರಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು. ಜಾತ್ರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮಗಳ ಜತೆಗೆ ಸಾರ್ವಜನಿಕರ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸುವ ಉದ್ದೇಶದಿಂದ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಧರ್ಮದರ್ಶಿಗಳಾದ ರಾಚಪ್ಪ ಮಿಣಜಗಿ, ಶಿವಪುತ್ರಪ್ಪ ಬೇವಿನಮರದ, ಶಿವಬಸಪ್ಪ ಯಂಡಿಗೇರಿ ಹಾಗೂ ಬಿ.ಡಿ. ಕಿಲಬನವರ ಸಸಿಗೆ ನೀರುಣಿಸುವ ಮೂಲಕ ಶಿಬಿರಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಧರ್ಮದರ್ಶಿಗಳು, ಆರೋಗ್ಯವೇ ಪ್ರತಿಯೊಬ್ಬರ ಜೀವನದ ಬಹುದೊಡ್ಡ ಸಂಪತ್ತಾಗಿದ್ದು, ಅದನ್ನು ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಮುನ್ನೆಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಹಿತಮಿತವಾದ ಆಹಾರ ಸೇವನೆ, ನಿಯಮಿತ ವ್ಯಾಯಾಮ ಹಾಗೂ ಪ್ರತಿನಿತ್ಯ ವಾಯುವಿಹಾರ ಮಾಡುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮವಾಗಿಟ್ಟುಕೊಳ್ಳಬಹುದು. ಯಾವುದೇ ಆರೋಗ್ಯ ಸಮಸ್ಯೆ ಕಂಡುಬಂದಾಗ ನಿರ್ಲಕ್ಷ್ಯ ಮಾಡದೆ ಸೂಕ್ತ ಸಮಯದಲ್ಲಿ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ ಡಾ. ಕೆ. ಹೃದಯಕುಮಾರ, ಡಾ. ರಾಹುಲ್ ಮಳಲಿ, ಡಾ. ಸಹೀಲ್ ಹಾಗೂ ಡಾ. ಶಿವಾನಂದ ಪಾಟೀಲ ಅವರು ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ವೈದ್ಯಕೀಯ ಸಲಹೆಗಳನ್ನು ನೀಡಿದರು.

ಆರೋಗ್ಯ ಸಿಬ್ಬಂದಿಯಾದ ಲಲಿತಾ ಬಾಗೋಡಿ, ಸವಿತಾ ಪವಾರ, ಆಶಾ ಕಾರ್ಯಕರ್ತೆ ಅನಸೂಯಾ ಬಿ.ಕೆ. ಹಾಗೂ ಬಿ. ಅನ್ನಪೂರ್ಣ ಅವರು ವೈದ್ಯರಿಗೆ ಸಹಕರಿಸಿ ಶಿಬಿರದ ಯಶಸ್ವಿ ನಿರ್ವಹಣೆಗೆ ನೆರವಾದರು.

ಜಾತ್ರಾ ಮಹೋತ್ಸವದ ಸಂಭ್ರಮದ ನಡುವೆ ಜನಸಾಮಾನ್ಯರ ಆರೋಗ್ಯದತ್ತ ಗಮನ ಹರಿಸಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು. ಶಿಬಿರದ ಯಶಸ್ಸಿಗೆ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ರಾಚೋಟಿ ಕಾಡಪ್ಪನವರ, ಉಪಾಧ್ಯಕ್ಷ ರಾಜು ತಡಸದ, ಕಾರ್ಯದರ್ಶಿ ನಾಗರಾಜ ಹಳ್ಳಿಕೇರಿ, ಖಜಾಂಚಿ ವಿಶ್ವನಾಥ ಕೆರಕಣ್ಣವರ ಸೇರಿದಂತೆ ವಿಶ್ವನಾಥ ಶೀರಿ, ಮೋಹನ ದೊಡಕುಂಡಿ, ಪುಟ್ಟರಾಜ ಮೂರಶಿಳ್ಳಿನ, ಶಂಕರ ಕಾರಕಟ್ಟಿ, ಮಲ್ಲಿಕಾರ್ಜುನ ದೇಗುಲ, ಮಂಜುನಾಥ ಶಿರೂರ, ಶಿವಯೋಗಿ ಶಿವಸಿಂಪಿಗೇರ, ರಾಚೋಟಿ ದೊಟ್ಯಾಳ, ಕಾರ್ತಿಕ ಭಜಂತ್ರಿ, ಸಮರ್ಥ ನವಲೂರ, ವಿಶ್ವನಾಥ ಇಟಗಿ, ಗಗನ ಗೋಕಾವಿ, ಈರಣ್ಣ ಚಳ್ಳಮರದ ಸೇರಿದಂತೆ ಜಾತ್ರಾ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಶ್ರಮಿಸಿದರು.

## ಸಂಕ್ಷಿಪ್ತ ಸುದ್ದಿಗಳು

### ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಕುಸ್ತಿ ಪಂದ್ಯಾವಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ಪಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಪ್ರಯುಕ್ತ ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಕುಸ್ತಿ ಪಂದ್ಯಾವಳಿ ನಡೆಯಿತು.

ಗದಗ ಜಿಲ್ಲಾ ಕುಸ್ತಿ ಸಂಘದ ಅಧ್ಯಕ್ಷ ವಸಂತ ಸಿದ್ದಮ್ಮನಹಳ್ಳಿ ಅವರು ಪಂದ್ಯಾವಳಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ, ಬಸವರಾಜ ಹಾತಲಗೇರಿ, ಮಂಜುನಾಥ ಹಾತಲಗೇರಿ, ಕುಸ್ತಿ ತರಬೇತುದಾರ ಬಾಹುಬಲಿ, ಹಾಕಿ ತರಬೇತುದಾರ ಮಂಜು ಬಾಗಡೆ, ಸೈಕ್ಲಿಂಗ್ ತರಬೇತುದಾರ ವಿದ್ಯಾ ಕುಲಕರ್ಣಿ ಸೇರಿದಂತೆ ಮಹಿಳೆಯರು ಹಾಗೂ ಕುಸ್ತಿಪಟುಗಳು ಉಪಸ್ಥಿತರಿದ್ದರು.

### ನಿಧನ

**ಸಮೀರ್ ಶೇಖ**



**ಗದಗ:** ನಗರದ ಮುಂಡರಗಿ ರಸ್ತೆಯ ಭರತ್ ಮೆಗಾ ಸಿಟಿ ನಿವಾಸಿಗಳು ಹಾಗೂ ಎಸ್.ಎಸ್. ಬೋರ್‌ವೆಲ್ ಮಾಲೀಕರಾದ ಸಮೀರ್ (ದಾದಪೀರ) ಶೇಖ (48) ಅವರು ಮಂಗಳವಾರ ಮುಂಜಾನೆ ನಿಧನರಾದರು.

ಮೃತರು ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಬುಧವಾರ ಬೆಳಿಗ್ಗೆ 10 ಗಂಟೆಗೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಾನಪದ ಕಲಾವಿದರು, ವಿದ್ವಾಂಸರು, ವಾದ್ಯಗಾರರು ಹಾಗೂ ಬುಡಕಟ್ಟು ಜನರನ್ನು ಒಳಗೊಂಡಂತೆ 'ಜಾನಪದ ಸಂಗಮ' ಹೆಸರಿನ ಕಾರ್ಯಕ್ರಮವನ್ನು ಗಿರಿಜನ ಉಪಯೋಜನೆಯಡಿ ಸರ್ಕಾರ ಹೊಸ ಯೋಜನೆಯಾಗಿ ಘೋಷಿಸಿದೆ.

ಈ ಯೋಜನೆಯಡಿ ರಾಜ್ಯದ ನಾಲ್ಕು ವಿಭಾಗಗಳಲ್ಲಿ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಿವಿಧ ಜಾನಪದ ಕಲಾ ಪ್ರಕಾರಗಳ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ 16 ರಿಂದ 40 ವರ್ಷದೊಳಗಿನ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಕರ್ನಾಟಕ ಜಾನಪದ ಅಕಾಡೆಮಿಯ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು 560002 ಇವರಿಗೆ ಸೆಪ್ಟೆಂಬರ್ 16ರೊಳಗೆ ತಲುಪಿಸುವಂತೆ ತಿಳಿಸಲಾಗಿದೆ. ಅರ್ಜಿ ನಮೂನೆಯನ್ನು ಕರ್ನಾಟಕ ಜಾನಪದ ಅಕಾಡೆಮಿಯ ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಇ-ಮೇಲ್ registrar.janapada@gmail.com ಹಾಗೂ ದೂರವಾಣಿ ಸಂಖ್ಯೆ 080-22215509 ಅನ್ನು ಸಂಪರ್ಕಿಸಬಹುದಾಗಿದೆ. ಶಿಬಿರಾರ್ಥಿಗಳ ಆಯ್ಕೆ ಕುರಿತು ಅಕಾಡೆಮಿಯ ತೀರ್ಮಾನವೇ ಅಂತಿಮವಾಗಿರುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಪ್ಯಿ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲಕ್ಷ್ಮೇಶ್ವರ, ಶಿರಹಟ್ಟಿ, ಮುಂಡರಗಿ ಸೇರಿಸಲು ಆಗ್ರಹ; ಬೇಡಿಕೆ ಈಡೇರಿಕೆಗೆ 8 ದಿನಗಳ ಗಡುವು

# ಬರಪಟ್ಟಿಯಿಂದ ಮೂರು ತಾಲೂಕು ಕೈಬಿಟ್ಟಿದ್ದಕ್ಕೆ ರೈತರ ಆಕ್ರೋಶ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸಬೇಕು ಎಂದು ಆಗ್ರಹಿಸಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟ, ವಿವಿಧ ರೈತ ಸಂಘಟನೆಗಳು ಹಾಗೂ ಕರವೇ ಸಂಘಟನೆಯವರು ಮಂಗಳವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಬರ ಪರಿಸ್ಥಿತಿ ವೀಕ್ಷಣೆ ಹಾಗೂ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಲಕ್ಷ್ಮೇಶ್ವರದಲ್ಲಿ ಮನವಿ ಸಲ್ಲಿಸಲಾಯಿತು.

ಮನವಿ ಪತ್ರದಲ್ಲಿ, ಮುಂಗಾರು ಮಳೆಯ ಕೊರತೆಯಿಂದ ಮೂರು ತಾಲೂಕುಗಳಲ್ಲೂ ಬೆಳೆಗಳು ಒಣಗಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಲಾಗಿದೆ. ಬೀಜ, ಗೊಬ್ಬರ, ಉಳುಮೆ ಹಾಗೂ ಕೂಲಿ ಸೇರಿದಂತೆ ಕೃಷಿಗೆ ಮಾಡಿದ ಖರ್ಚು ಕೂಡ ಮರಳದಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿವರಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಅವರು ಪರಿಸ್ಥಿತಿ ಪರಿಶೀಲಿಸಿ ಬರ ಘೋಷಣೆಯ ಭರವಸೆ ನೀಡಿದ್ದರೂ, ತಾಲೂಕುಗಳನ್ನು ಬರಪೀಡಿತ ಪಟ್ಟಿಯಿಂದ ಕೈಬಿಟ್ಟಿರುವುದು ಅನ್ಯಾಯವಾಗಿದೆ ಎಂದು ರೈತ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ.

***ಬೆಳೆನಷ್ಟಕ್ಕೆ ಎಕರೆಗೆ 50 ಸಾವಿರ ಪರಿಹಾರಕ್ಕೆ ಒತ್ತಾಯ***

ಮೂರು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಿ, ಜಂಟಿ ಬೆಳೆನಷ್ಟ ಸಮೀಕ್ಷೆ ನಡೆಸಬೇಕು. ಪ್ರತಿ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ನೀಡಬೇಕು ಹಾಗೂ ರೈತರ 1 ಲಕ್ಷದವರೆಗಿನ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಬೆಳೆ ವಿಮೆ ಹಾಗೂ ಎಸ್‌ಡಿಆರ್‌ಎಫ್ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡಬೇಕು. ಜಾನುವಾರುಗಳಿಗೆ ಮೇವು ಬ್ಯಾಂಕ್ ಆರಂಭಿಸಬೇಕು. ಉದ್ಯೋಗ ಖಾತರಿ ಯೋಜನೆಯಡಿ ಕೆಲಸದ ದಿನಗಳನ್ನು ಹೆಚ್ಚಿಸಿ, ಕೂಲಿಯನ್ನು ಸಕಾಲದಲ್ಲಿ ಪಾವತಿಸುವ ಮೂಲಕ ಗ್ರಾಮೀಣ ಜನರ ಗುಳೆ ತಡೆಯಬೇಕು ಎಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಹೊನ್ನಪ್ಪ ವಡ್ಡರ, ಮಹೇಶ ಹೊಗೆಸೊಪ್ಪಿನ, ನಾಗರಾಜ ಚಿಂಚಲಿ, ಸೋಮಣ್ಣ ಡಾಣಗಲ್, ಚನ್ನಪ್ಪ ಷಣ್ಮುಖಿ, ಚಂದ್ರು ಮಾಗಡಿ, ಬಸವರಾಜ ಹಿರೇಮನಿ, ಮಂಜು ಮುಳಗುಂದ, ಸುರೇಶ ಹಟ್ಟಿ, ಭರಮಣ್ಣ ರೊಟ್ಟಿಗವಾಡ, ಎಚ್. ಎಚ್. ಪಾಟೀಲ, ಬಿ.ಎನ್. ಉಮಚಗಿ, ಶಿವಪ್ಪ ಹುಲಕೋಟಿ, ಬಸಣ್ಣ ಹಂಜಿ, ದ್ಯಾಮಪ್ಪ ಮತ್ತೂರ, ಬಸವರಾಜ ಪ್ಯಾಟಿ, ಶಿವಾನಂದ ಲಿಂಗಶೆಟ್ಟಿ ಸೇರಿದಂತೆ ವಿವಿಧ ರೈತ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ರೈತರು ಪಾಲ್ಗೊಂಡಿದ್ದರು.

### ವಸತಿ ಭೂಮಿ ಹಕ್ಕು ಖಾತ್ರಿಗೆ ಒತ್ತಾಯ; ಜಿಲ್ಲಾದ್ಯಂತ ಹೋರಾಟಕ್ಕೆ ಸ್ಲಂ ಸಮಿತಿ ಸಿದ್ಧತೆ

# ಸ್ಲಂ ಜನರ ಹಕ್ಕಿಗೆ ಸರ್ಕಾರ ಎಚ್ಚೆತ್ತುಕೊಳ್ಳಲಿ



**ವಿಜಯಸಾಕ್ಷಿ ಸುದ್ದಿ, ರೋಣ**

ರಾಜ್ಯದ ಅಘೋಷಿತ ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆ 1973ರಡಿ ಗುರುತಿಸಿ ಘೋಷಣೆ ಮಾಡಬೇಕು. ಘೋಷಿತ ಕೊಳಗೇರಿ ಪ್ರದೇಶಗಳ ನಿವಾಸಿಗಳಿಗೆ ವಸತಿ ಸೌಲಭ್ಯ ಕಲ್ಪಿಸಿ ಭೂಮಿ ಹಕ್ಕನ್ನು ಖಾತ್ರಿಗೊಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕು ಮಟ್ಟದ ಸ್ಲಂ ಪ್ರದೇಶದ ಮುಖಂಡರಿಗೆ ಸ್ಲಂ ಕಾಯ್ದೆ ಕುರಿತು ಆಯೋಜಿಸಿದ್ದ ಮಾಹಿತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಸುಮಾರು 100ಕ್ಕೂ ಹೆಚ್ಚು ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆಯಡಿ ಘೋಷಣೆ ಮಾಡಲಾಗಿದ್ದು, ಇನ್ನೂ 80ಕ್ಕೂ ಹೆಚ್ಚು ಗುಡಿಸಲು ಪ್ರದೇಶಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು. ಆದರೆ ಘೋಷಿತ ಕೊಳಗೇರಿ ಪ್ರದೇಶಗಳಿಗೆ ನಾಗರಿಕ ಸೌಲಭ್ಯಗಳನ್ನು ಕಲ್ಪಿಸಬೇಕಾದ ಅಧಿಕಾರಿಗಳು ಅಭಿವೃದ್ಧಿ ಕಾರ್ಯದಲ್ಲಿ ತಾರತಮ್ಯ ಮಾಡುತ್ತಿರುವುದು ಖಂಡನೀಯ ಎಂದು ಆರೋಪಿಸಿದರು.

ಸುಮಾರು 70 ವರ್ಷಗಳಿಂದ ಜನರು ವಾಸಿಸುತ್ತಿರುವ ಜಿಲ್ಲೆಯ ಹಲವಾರು ಕೊಳಗೇರಿ ಪ್ರದೇಶಗಳಲ್ಲಿ ಕನಿಷ್ಠ ಮೂಲಸೌಲಭ್ಯಗಳನ್ನು ಒದಗಿಸುವಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸಂಪೂರ್ಣ ವಿಫಲರಾಗಿದ್ದಾರೆ ಎಂದು ದೂರಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೊಳಗೇರಿ ಅಭಿವೃದ್ಧಿ ಮತ್ತು ವಸತಿಗಾಗಿ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದ್ದರೂ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಅನುದಾನದ ದುರ್ಬಳಕೆಯಿಂದ ಗದಗ ಜಿಲ್ಲೆಯ ಹಲವು ಸ್ಲಂ ಪ್ರದೇಶಗಳು ಇಂದಿಗೂ ಸೌಲಭ್ಯ ವಂಚಿತವಾಗಿವೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ವಕೀಲ ಎಂ.ಬಿ. ನದಾಫ, ಗದಗ ಜಿಲ್ಲಾ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡ ಮೌಲಾಸಾಬ ಗಚ್ಚಿ, ರೋಣ ತಾಲೂಕು ಮಟ್ಟದ ಮುಖಂಡರಾದ ಬಸವರಾಜ ಕುರಿ, ರಹಿಮಾನಬಿ ಕೊಲಕಾರ, ಹುಸೇನಬಿ ಸರಖವಾಸ, ಭಾಗ್ಯ ಗೊಲ್ಲರ, ಶಮಶಾದ್ ಪೊಲಾವಾಲೆ, ಶಾಮೀದ್ ಚೌಧರಿ, ಅಲ್ಲಾಬಿ ಚೌಧರಿ, ಫರೀದಾ ಮೀರಾನಾಯ್ಕ, ಮಾಳವ್ವ ಹಿರೇಮನಿ, ಈರಪ್ಪ ಗದುಗಿನ, ಜಹರಾಬಿ ಚೌಧರಿ, ಶಮಶಾದ್ ಇಟಗಿ, ಶಂಕ್ರಪ್ಪ ಮುಂಡರಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ರೋಣ ತಾಲೂಕು ಸ್ಲಂ ಸಮಿತಿ ಘಟಕವನ್ನು ರಚಿಸಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಜಿಲ್ಲಾ ಸಮಿತಿ ಸದಸ್ಯ ಮೌಲಾಸಾಬ ಎಸ್. ಗಚ್ಚಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> **ಗದಗ ಜಿಲ್ಲಾ ಸ್ಲಂ ಸಮಿತಿಯು ಕಳೆದ ಎರಡು ದಶಕಗಳಿಂದ ಕೊಳಗೇರಿ ಜನರ ಸಂವಿಧಾನಬದ್ಧ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸುತ್ತಿದೆ. ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳಲ್ಲಿ ಸ್ಲಂ ಸಮಿತಿಯನ್ನು ವಿಸ್ತರಿಸಿ, ಸ್ಲಂ ಜನರ ಪರವಾಗಿ ದೊಡ್ಡ ಮಟ್ಟದ ಹೋರಾಟ ರೂಪಿಸಲಾಗುವುದು.**
> **- ಇಮ್ತಿಯಾಜ್ ಆರ್. ಮಾನ್ವಿ,**
> ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ

# ಎಎಪಿ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷರಾಗಿ ಗೋಣೆಣ್ಣವರ ನೇಮಕ

**ವಿಜಯಸಾಕ್ಷಿ ಸುದ್ದಿ, ಗದಗ**



ಆಮ್ ಆದ್ಮಿ ಪಕ್ಷದ ಗದಗ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾಗಿ ನಿವೃತ್ತ ಉಪನ್ಯಾಸಕರಾದ ಪಿ.ವಿ. ಗೋಣೆಣ್ಣವರ ಅವರನ್ನು ನೇಮಕ ಮಾಡಲಾಗಿದೆ.

ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಅವರ ಆದೇಶದ ಮೇರೆಗೆ ಗದಗ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ ಭಾಷಾಸಾಬ ಕಲೇಗಾರ ಅವರು ಗೋಣೆಣ್ಣವರ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಪಕ್ಷದ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ಮುಂದಿನ ಆದೇಶದವರೆಗೆ ಜವಾಬ್ದಾರಿಯನ್ನು ನಿರ್ವಹಿಸುವಂತೆ ಸೂಚಿಸಲಾಗಿದೆ.

ಈ ಸಂದರ್ಭದಲ್ಲಿ ಆಮ್ ಆದ್ಮಿ ಪಕ್ಷದ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ ಭಾಷಾಸಾಬ ಕಲೇಗಾರ, ಮುನಾಫ ಹರ್ಲಾಪೂರ, ಜಾಕೀರ ನಾಗನೂರ, ಪೀರಸಾಬ ಶೇಖ, ರಾಜೇಂದ್ರಕುಮಾರ ಹಿರೇಮಠ, ರಮೇಶ ಗದಗ, ಸಿರಾಜ ರೋಣದ, ಶೃತಿ ಹಿರೇಮಠ, ರೇಷ್ಮಾ ಜಕ್ಕಲಿ, ಆಂಜನೇಯ ಎಂ., ಮಂಜುನಾಥ ಗಾರ್ಗಿ, ಸಂತೋಷ ಜೈನ್, ಸುಭಾಸ ಕುಂಬಾರ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದು ಶುಭ ಕೋರಿದರು.

### ವಾರ್ಡ್ ನಂ. 24ರಲ್ಲಿ 1 ಕೋಟಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

# ನಾಲ್ವಾಡ ಓಣಿಗೆ ಹೊಸ ಸೌಲಭ್ಯಗಳ ಸ್ಪರ್ಶ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯ ವಾರ್ಡ್ ನಂ. 24ರ ನಾಲ್ವಾಡ ಓಣಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ಹಾಗೂ ಐತಿಹಾಸಿಕ ಪಂಚರ ಹೊಂಡ ಬಾವಿಯ ಸ್ವಚ್ಛತಾ ಮತ್ತು ಕುಡಿಯುವ ನೀರಿನ ಯೋಜನೆ ಕಾಮಗಾರಿಗಳಿಗೆ ಶಾಸಕ ಡಾ. ಎಚ್.ಕೆ. ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಗರದ ಅಭಿವೃದ್ಧಿಗೆ ಈಗಾಗಲೇ ವಾರ್ಡ್ ನಂ. 24ರಲ್ಲಿ ಅತ್ಯಂತ ಅಗತ್ಯವಿರುವ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಗುಣಮಟ್ಟದ ಕಾಮಗಾರಿಗಳಿಗೆ ಆದ್ಯತೆ ನೀಡುವ ಮೂಲಕ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ಮುಂಬರುವ ದಿನಗಳಲ್ಲಿ ಗದಗ-ಬೆಟಗೇರಿ ನಗರಕ್ಕೆ ಹೆಚ್ಚಿನ ಅನುದಾನ ತಂದು ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ವಾರ್ಡ್ ನಂ. 24ರಲ್ಲಿ ಸಿ.ಸಿ. ರಸ್ತೆ ನಿರ್ಮಾಣ, ಒಳಚರಂಡಿ ನಿರ್ಮಾಣ, ಬೋರ್‌ವೆಲ್ ಕೊರೆಸಿ ನೀರಿನ ಸೌಲಭ್ಯ ಕಲ್ಪಿಸುವುದು ಸೇರಿದಂತೆ ಒಟ್ಟು 1 ಕೋಟಿ ಮೊತ್ತದ ಬೃಹತ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಮೂರು ಬೋರ್‌ವೆಲ್‌ಗಳ ನಿರ್ಮಾಣ ಹಾಗೂ ಎರಡು ಹೈಮಾಸ್ಟ್ ಬೀದಿ ದೀಪಗಳ ಅಳವಡಿಕೆಯೂ ಯೋಜನೆಯಲ್ಲಿ ಸೇರಿವೆ.

ಇದೇ ವೇಳೆ ನಾಲ್ವಾಡಗಲ್ಲಿಯ ಓಂಕಾರೇಶ್ವರ ದೇವಸ್ಥಾನದ ಫಾರ್ಮ್ ನಂ. 3ರ ಉತಾರವನ್ನು ಮಾಡಿಸಿ ದೇವಸ್ಥಾನ ಸಮಿತಿಯವರಿಗೆ ವಿತರಿಸಲಾಯಿತು.

ಐತಿಹಾಸಿಕ ಪಂಚರ ಹೊಂಡ ಬಾವಿಯನ್ನು ಸ್ವಚ್ಛಗೊಳಿಸಿ, ಅಲ್ಲಿಂದ ಮೋಟರ್ ಅಳವಡಿಸುವ ಮೂಲಕ ಪೈಪ್‌ಲೈನ್ ಮೂಲಕ ಶಿವಳ್ಳಿಯವರ ಓಣಿ, ಗಾಳಪ್ಪನವರ ಓಣಿ, ಎಲಿಗಾರವರ ಓಣಿ, ಮಕಾನದಾರ ಮನೆ ಲೈನ್ ಹಾಗೂ ವೆಂಕಟೇಶ್ವರ ದೇವಸ್ಥಾನದ ಸುತ್ತಮುತ್ತಲಿನ ನಿವಾಸಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಶಿವಪ್ಪ ತಿಪ್ಪಣ್ಣ ಬಳ್ಳಾರಿ ಅವರು ಕಾಮಗಾರಿಯ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಪ್ರಭು ಬುರಬುರೆ, ಬಿ.ಬಿ. ಅಸೂಟಿ, ಎಂ.ಸಿ. ಶೇಖ, ಬರಕತಲಿ ಮುಲ್ಲಾ, ಓಣಿಯ ಹಿರಿಯರಾದ ಬುಡ್ಡಣ್ಣ ಹಬೀಬ, ಅಶೋಕ ಜೈನ, ಈರಣ್ಣ ಲಕ್ಕುಂಡಿ, ಕುಬೇರಪ್ಪ ಪರ್ವತಗೌಡ್ರ, ವಿ.ಕೆ. ಮಟ್ಟಿ, ಅಪ್ಪುರಾಜ ಭದ್ರಕಾಳಿಮಠ, ಪ್ರವೀಣ ವಾರಕರ, ಸಿದ್ದಣ್ಣ ಹರ್ತಿ, ಮಂಜುನಾಥ ಲಕ್ಕುಂಡಿ, ಬಸವರಾಜ ಗಾಳಪ್ಪನವರ, ಬಸವರಾಜ ಹರ್ತಿ, ಮಲ್ಲಪ್ಪ ಅಣ್ಣಿಗೇರಿ, ಶ್ರೀಧರ ವಜ್ರಬಂಡಿ, ನಜೀರ ಕುನ್ನಿಬಾವಿ, ಮಂಜು ಮುಳಗುಂದ ಸೇರಿದಂತೆ ವಾರ್ಡ್ ನಂ. 24ರ ಗುರುಹಿರಿಯರು, ಯುವಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಅಂತಿಮ ತೀರ್ಪಿನವರೆಗೆ ಹಳೆಯ ಮೀಸಲಾತಿ ವ್ಯವಸ್ಥೆ ಮುಂದುವರಿಸಿ




**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ವರ್ಗೀಕರಣ ಹಾಗೂ ಶೇಕಡಾವಾರು ಹಂಚಿಕೆಗೆ ಸಂಬಂಧಿಸಿದ ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ಹಿನ್ನೆಲೆಯಲ್ಲಿ, ಅಂತಿಮ ತೀರ್ಪು ಪ್ರಕಟವಾಗುವವರೆಗೆ ಹಳೆಯ ಮೀಸಲಾತಿ ವ್ಯವಸ್ಥೆಯನ್ನೇ ಮುಂದುವರಿಸಬೇಕು ಎಂದು ಒತ್ತಾಯಿಸಿ ಅಖಿಲ ಕರ್ನಾಟಕ ಬಂಜಾರ, ಭೋವಿ, ಕೊರಚ ಹಾಗೂ ಕೊರಮ (ಕೊಲಂಬೆ) ಕ್ಷೇಮಾಭಿವೃದ್ಧಿ ಸಂಘದ ಮುಖಂಡರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಗದಗಕ್ಕೆ ಆಗಮಿಸಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿದ ಸಂಘದ ಮುಖಂಡರು, ಒಳ ಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ನ್ಯಾಯಾಲಯದ ಅಂತಿಮ ತೀರ್ಪು ಬರುವವರೆಗೆ ಯಾವುದೇ ಹೊಸ ವರ್ಗೀಕರಣವನ್ನು ಜಾರಿಗೊಳಿಸದೆ ಹಿಂದಿನ ಮೀಸಲಾತಿ ವ್ಯವಸ್ಥೆಯನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಸರ್ಕಾರವು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿಗೆ ಸಂಬಂಧಿಸಿದಂತೆ 2025ರ ಆಗಸ್ಟ್ 19ರಿಂದ 2026ರ ಮೇ 13ರವರೆಗೆ ವಿವಿಧ ಹಂತಗಳಲ್ಲಿ ನಿರ್ಣಯಗಳನ್ನು ಕೈಗೊಂಡಿದೆ. ಆದರೆ, ಒಳ ಮೀಸಲಾತಿಯ ವರ್ಗೀಕರಣ ಹಾಗೂ ಶೇಕಡಾವಾರು ಹಂಚಿಕೆಯನ್ನು ಪ್ರಶ್ನಿಸಿ ಪ್ರಕರಣಗಳು ನ್ಯಾಯಾಲಯದ ವಿಚಾರಣೆಯಲ್ಲಿದ್ದು, ಇನ್ನೂ ಅಂತಿಮ ತೀರ್ಪು ಪ್ರಕಟವಾಗಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ವರ್ಗೀಕರಣಕ್ಕೆ ಸಂಬಂಧಿಸಿದ ಪ್ರಕರಣಗಳು ನ್ಯಾಯಾಲಯದಲ್ಲಿ ಅಂತಿಮವಾಗಿ ಇತ್ಯರ್ಥವಾಗುವವರೆಗೆ ಹಳೆಯ ಮೀಸಲಾತಿ ವ್ಯವಸ್ಥೆಯನ್ನು ಮುಂದುವರಿಸುವ ಕುರಿತು ಸರ್ಕಾರವು 2026ರ ಫೆಬ್ರವರಿ 27ರಂದು ನಿರ್ಣಯ ಪ್ರಕಟಿಸಿತ್ತು ಎಂದೂ ಮುಖಂಡರು ಗಮನ ಸೆಳೆದರು.

ಪ್ರಸ್ತುತ ಘಾಕ ಓ.ಆ. 23399/2026 ಪ್ರಕರಣದಲ್ಲಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳದಂತೆ ಮಧ್ಯಂತರ ತಡೆ ಆದೇಶ ಜಾರಿಯಲ್ಲಿರುವುದರಿಂದ, ನ್ಯಾಯಾಲಯದ ಅಂತಿಮ ತೀರ್ಪು ಬರುವವರೆಗೆ ಹಳೆಯ ಮೀಸಲಾತಿ ವ್ಯವಸ್ಥೆಯನ್ನೇ ಮುಂದುವರಿಸುವುದು ವಿದ್ಯಾರ್ಥಿಗಳು ಹಾಗೂ ಉದ್ಯೋಗಾಕಾಂಕ್ಷಿಗಳ ಹಿತದೃಷ್ಟಿಯಿಂದ ಅಗತ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಇದೇ ತಿಂಗಳ 13ರಂದು ಆರಂಭವಾಗಲಿರುವ ಕರ್ನಾಟಕ ವಿಧಾನ ಸಭೆಯ ಮಳೆಗಾಲದ ಅಧಿವೇಶನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿ, ಬಂಜಾರ, ಭೋವಿ, ಕೊರಚ ಹಾಗೂ ಕೊರಮ (ಕೊಲಂಬೆ) ಸಮುದಾಯಗಳ ಪರವಾಗಿ ಸದನದಲ್ಲಿ ಧ್ವನಿ ಎತ್ತಬೇಕು ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ತೂಚ ಚೌಹಾಣ್, ಗುರು ಲಮಾಣಿ, ತುಕಾರಾಮ ಲಮಾಣಿ, ಸಂತೋಷ್ ರಾಥೋಡ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಂಚಾರ ಸಮಸ್ಯೆ ನಿವಾರಣೆಗೆ ಸಾರ್ವಜನಿಕರ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದಲ್ಲಿ ದಿನನಿತ್ಯ ಹಾಗೂ ರವಿವಾರ ನಡೆಯುತ್ತಿರುವ ಸಂತೆ ಮಾರುಕಟ್ಟೆಯನ್ನು ಸ್ಥಳಾಂತರಿಸಿ, ಪಾಳುಬಿದ್ದಿರುವ ಎಪಿಎಂಸಿ ಮಾರುಕಟ್ಟೆಯನ್ನು ದುರಸ್ತಿಗೊಳಿಸಿ ಕಾರ್ಯಾರಂಭ ಮಾಡಬೇಕು ಎಂದು ಆಗ್ರಹಿಸಿ ಸಾರ್ವಜನಿಕರು ಮಂಗಳವಾರ ತಹಸೀಲ್ದಾರ್ ಕೆ. ರಾಘವೇಂದ್ರ ರಾವ್ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಟ್ಟಣ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಸಂತೋಷ ಕುರಿ, ಸಂತೆ ಮಾರುಕಟ್ಟೆಯಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ಹೇಳಿದರು. ಗ್ರಾಮೀಣ ಪ್ರದೇಶಗಳಿಂದ ವಿವಿಧ ಕೆಲಸಗಳಿಗಾಗಿ ಪಟ್ಟಣಕ್ಕೆ ಆಗಮಿಸುವ ಜನರು ಪೊಲೀಸ್ ಠಾಣೆ, ತಾಲೂಕು ಆಸ್ಪತ್ರೆ, ತಾಲೂಕು ಪಂಚಾಯಿತಿ, ಪಟ್ಟಣ ಪಂಚಾಯಿತಿ, ರೇಷ್ಮೆ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ ಹಾಗೂ ಅರಣ್ಯ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಿಗೆ ಮಾರುಕಟ್ಟೆ ಮಾರ್ಗವಾಗಿಯೇ ತೆರಳಬೇಕಾದ ಅನಿವಾರ್ಯತೆ ಇದೆ ಎಂದರು.

ಇಕ್ಕಟ್ಟಾದ ರಸ್ತೆಯಲ್ಲಿ ಮಾರುಕಟ್ಟೆ ನಡೆಯುತ್ತಿರುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಹಲವು ಅಪಘಾತಗಳು ಸಂಭವಿಸಿದ ಉದಾಹರಣೆಗಳಿವೆ ಎಂದು ತಿಳಿಸಿದರು.

ಬಸ್ ನಿಲ್ದಾಣದ ಸಮೀಪದಲ್ಲಿರುವ ಸರ್ಕಾರದ ಎಪಿಎಂಸಿ ಜಾಗೆ ಪಾಳುಬಿದ್ದು ಕಸ ಶೇಖರಣಾ ಘಟಕವಾಗಿ ಮಾರ್ಪಟ್ಟಿದೆ. ಇದರಿಂದ ದುರ್ವಾಸನೆ ಬೀರುತ್ತಿದ್ದು, ನಿತ್ಯ ಸಂಚರಿಸುವ ಪ್ರಯಾಣಿಕರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ದೂರಿದರು.

ಎಪಿಎಂಸಿ ಮಾರುಕಟ್ಟೆಯನ್ನು ಕೂಡಲೇ ದುರಸ್ತಿಗೊಳಿಸಿ ದಿನನಿತ್ಯ ಹಾಗೂ ರವಿವಾರ ನಡೆಯುವ ಸಂತೆಯನ್ನು ಅಲ್ಲಿಗೆ ಸ್ಥಳಾಂತರಿಸಬೇಕು. ರೈತರ ವ್ಯಾಪಾರ ವಹಿವಾಟಿಗೆ ಸೂಕ್ತ ಅವಕಾಶ ಕಲ್ಪಿಸಬೇಕು. ಇಲ್ಲವಾದಲ್ಲಿ ಹೋರಾಟದ ಮೂಲಕ ನ್ಯಾಯಯುತ ಬೇಡಿಕೆ ಈಡೇರಿಸಿಕೊಳ್ಳಲಾಗುವುದು ಎಂದು ಮನವಿಯಲ್ಲಿ ಎಚ್ಚರಿಸಲಾಗಿದೆ.

ಪಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ರಾಮಣ್ಣ ಕಂಬಳಿ, ಫಕ್ಕೀರೇಶ ರಟ್ಟಿಹಳ್ಳಿ, ವಿಠ್ಠಲ ಭಿಡವೆ, ಸಂತೋಷ ತೋಡೆಕಾರ, ಬಸವರಾಜ ಕಲ್ಯಾಣಿ, ಚಂದ್ರು ಜೋಗೇರ, ಜಗದೀಶ ತೇಲಿ, ಗಣೇಶ ಬಿಢವೆ, ಪರಶುರಾಮ ಡೊಂಕಬಳ್ಳಿ, ಲಕ್ಷ್ಮಣ ಪವಾರ, ಹನಮಂತ ಕುರಿ, ಮಾರುತಿ ಕೋಳಿ, ವಿಶ್ವನಾಥ ಧಳವೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka